# ದಿನಾಂಕ: 06-09-2010ರಂದು ಪೂರ್ವಾಹ್ನ:11-00 ಗಂಟೆಗೆ ಹೊಯ್ಸಳ ಸಭಾಂಗಣ, ಜಿಲ್ಲಾ ಪಂಚಾಯತ್, ಹಾಸನ ಇಲ್ಲಿ ನಡೆದ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯ ನಡವಳಿಗಳು

ಅಧ್ಯಕ್ಷತೆ: ಶ್ರೀಮತಿ ಕಾಮಾಕ್ಷಿರಾಜು,

ಆಧ್ಯಕ್ಷರು,

ಜಿಲ್ಲಾ ಪಂಚಾಯತ್, ಹಾಸನ.

ಹಾಜರಿ: 43

ಗೈರು ಹಾಜರಿ: 15

| ಕ್ರಸಂ | ವಿಷಯ | ಚರ್ಚೆ | ತೀರ್ಮಾನ |
|---|---|---|---|
| | | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿರವರು ಸಭೆಗೆ ಮಾನ್ಯ ಅಧ್ಯಕ್ಷರು, ಮಾನ್ಯ ಉಪಾಧ್ಯಕ್ಷರು, ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರು, ತಾಲ್ಲೂಕು ಪಂಚಾಯಿತಿ ಅಧ್ಯಕ್ಷರು, ಜಿಲ್ಲಾ ಮಟ್ಟದ ಅಧಿಕಾರಿಗಳು, ಪತ್ರಿಕಾ ಮಾಧ್ಯಮದವರನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆ ವಹಿಸಿ ಸಭೆಯನ್ನು ನಡೆಸಿಕೊಡುವಂತೆ ಮಾನ್ಯ ಅಧ್ಯಕ್ಷರನ್ನು ಕೋರಿದರು. | |
| 1 | ದಿನಾಂಕ: 30-07-2010 ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಅಂಗೀಕರಿಸುವ ಬಗ್ಗೆ. | ದಿ: 30-07-2010ರಂದು ನಡೆದ ಜಿಲ್ಲಾ ಪಂಚಾಯಿತಿ ಸಾಮಾನ್ಯ ಸಭೆಯ ನಡವಳಿಗಳನ್ನು ಮಾನ್ಯ ಅಧ್ಯಕ್ಷರಾದ ಶ್ರೀಮತಿ ಕಾಮಾಕ್ಷಿರಾಜುರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಸಭೆಯ ನಡವಳಿಗಳನ್ನು ಅನುಮೋದಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡುತ್ತಾ, ಪ್ರಸಕ್ತ ಸಾಲಿಗೆ ಕುಡಿಯುವ ನೀರಿನ ಯೋಜನೆಗಳಿಗೆ ಲಿಂಕ್ ಡಾಕ್ಯುಮೆಂಟಿನಲ್ಲಿ ಯಾವುದೇ ಅನುದಾನವನ್ನು ನಿಗದಿಪಡಿಸಿರುವುದಿಲ್ಲ. ಅಲ್ಲದೆ ಕುಡಿಯುವ ನೀರಿನ ಯೋಜನೆಗಳಿಗೆ ಹಲವಾರು ಬಾರಿ ಪ್ರಸ್ತಾವನೆಯನ್ನು ಸಲ್ಲಿಸಿದ್ದರೂ ಸಹ ಯಾವುದೇ ಅನುದಾನವನ್ನು ಬಿಡುಗಡೆ ಮಾಡಿರುವುದಿಲ್ಲ. ಹಿಂದಿನ ಸಭೆಯಲ್ಲಿ ಕುಡಿಯುವ ನೀರು, ಆಶ್ರಯ ಮನೆ, ಗ್ರಾಮೀಣ ರಸ್ತೆ, ಆಲೂಗೆಡ್ಡೆ ಬೆಳೆಗೆ ಪರಿಹಾರ, ವಿದ್ಯುತ್ ಇಲಾಖೆಗೆ ಅಗತ್ಯ ಟಿ.ಸಿ.ವಿದ್ಯುತ್ ಕಂಬಗಳು, ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕೆ ಅನುದಾನ, ನಬಾರ್ಡ್ ಪ್ರೌಢಶಾಲೆಗಳಿಗೆ ಹೆಚ್ಚುವರಿ ಕೊಠಡಿಗಳ ನಿರ್ಮಾಣಕ್ಕೆ ಅನುದಾನ ಮತ್ತು ಹಾಸನ ಜಿಲ್ಲೆಯನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸುವುದು ಹೀಗೆ ಒಟ್ಟು 9 ಅಂಶಗಳ ಬಗ್ಗೆ ದೀರ್ಘ ಚರ್ಚೆಯನ್ನು ನಡೆದು ಸಭೆಯಲ್ಲಿ ನಿರ್ಣಯ ಮಾಡಿ ಮಾನ್ಯ ಮುಖ್ಯ ಮಂತ್ರಿಗಳು, ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಹಾಗೂ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಆದರೆ ಸರ್ಕಾರದಿಂದ ಇದುವರೆಗೂ ಯಾವುದೇ ಕ್ರಮ ವಹಿಸಿರುವುದಿಲ್ಲ. | ಸಭೆಯಲ್ಲಿ ಚರ್ಚಿಸಿದಂತೆ, ಗ್ರಾಮೀಣ ಕುಡಿಯುವ ನೀರು, ಅಂಗನವಾಡಿ ಕೇಂದ್ರಗಳ ಕಟ್ಟಡ ನಿರ್ಮಾಣ, ನಬಾರ್ಡ್ ಪ್ರೌಢ ಶಾಲೆಗಳಿಗೆ ಹೆಚ್ಚುವರಿ ಕೊಠಡಿಗಳ ನಿರ್ಮಾಣ, ಆಲೂಗೆಡ್ಡೆ ಬೆಳೆಗೆ ಪರಿಹಾರ, ಗ್ರಾಮೀಣ ರಸ್ತೆಗಳ ನಿರ್ಮಾಣಕ್ಕೆ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ₹.50.00ಲಕ್ಷಗಳು, ಆಶ್ರಯ ಮನೆ ನಿರ್ಮಾಣಕ್ಕೆ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಮಾನ್ಯ ಮುಖ್ಯ ಮಂತ್ರಿಗಳು, ಮಾನ್ಯ |

| | | | |
|---|---|---|---|
| | | ಆದ್ದರಿಂದ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಮತ್ತೊಮ್ಮೆ ನಿರ್ಣಯವನ್ನು ಮಾಡಿ ಮಾನ್ಯ ಮುಖ್ಯ ಮಂತ್ರಿಗಳಿಗೆ, ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಹಾಗೂ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವುದು. ಇದರ ಬಗ್ಗೆಯೂ ಸಹ ಸರ್ಕಾರದ ಹಂತದಲ್ಲಿ ಯಾವುದೇ ಕ್ರಮ ವಹಿಸದಿದ್ದಲ್ಲಿ ಅನಿರ್ಧಿಷ್ಟಾವಧಿ ಧರಣಿ ಮಾಡುವುದು ಸೂಕ್ತವೆಂದು ಅಭಿಪ್ರಾಯ ಪಟ್ಟರು.<br>ಮಾನ್ಯ ಸದಸ್ಯರಾದ ಶ್ರೀ ಎ.ಇ.ಚಂದ್ರಶೇಖರ್ ರವರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿ ಸಾಮಾನ್ಯ ಸಭೆಯಲ್ಲಿ ಯಾವ ತೀರ್ಮಾನ ಕೈಗೊಂಡರೂ ಸಹ ಕಾರ್ಯರೂಪಕ್ಕೆ ಬರುವುದಿಲ್ಲ. 2009-10ನೇ ಸಾಲಿನಲ್ಲಿ ಕುಡಿಯುವ ನೀರಿನ ಯೋಜನೆಗಳನ್ನು ಅನುಷ್ಠಾನ ಮಾಡಲು ₹.9.98ಕೋಟಿಗಳ ಅನುದಾನಕ್ಕೆ ಕ್ರಿಯಾ ಯೋಜನೆಯನ್ನು ಸಿದ್ದಪಡಿಸಿ ಅದರಲ್ಲಿ ಕೆಲವು ಕಾಮಗಾರಿಗಳನ್ನು ಅನುಷ್ಠಾನ ಮಾಡಿದ್ದು, ಕ್ರಿಯಾ ಯೋಜನೆಗೆ ಸರ್ಕಾರ ಅನುಮೋದನೆ ನೀಡಿರುವುದಿಲ್ಲ. ಇದರಿಂದ ಕುಡಿಯುವ ನೀರಿನ ಕಾಮಗಾರಿಗಳನ್ನು ಅನುಷ್ಠಾನ ಮಾಡಿರುವ ಗುತ್ತಿಗೆದಾರರು ಸಂಕಷ್ಟಕ್ಕೀಡಾಗಿದ್ದಾರೆ. ಆದ್ದರಿಂದ ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಹೆಚ್.ಡಿ.ರಾಮೇಗೌಡರವರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿ ಸಾಮಾನ್ಯ ಸಭೆಯ ನಿರ್ಣಯಗಳು ಅನುಷ್ಠಾನಕ್ಕೆ ಬಾರದಿರುವ ಬಗ್ಗೆ ಅಸಮಾಧಾನವನ್ನು ವ್ಯಕ್ತಪಡಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಕೆ.ಎಸ್.ಕುಮಾರಸ್ವಾಮಿರವರು ಮಾತನಾಡುತ್ತಾ, 12ನೇ ಹಣಕಾಸು ಯೋಜನೆಯಡಿ ಸರ್ಕಾರದ ನಿರ್ದೇಶನದಂತೆ, ಶೇ.25ರಷ್ಟು ಹೆಚ್ಚುವರಿ ಅನುದಾನಕ್ಕೆ ಕ್ರಿಯಾ ಯೋಜನೆಯನ್ನು ಸಿದ್ದಪಡಿಸಿ ಕಾಮಗಾರಿಗಳನ್ನು ಅನುಷ್ಠಾನ ಮಾಡಲಾಗಿರುತ್ತದೆ. ಆದರೆ, ಗುತ್ತಿಗೆದಾರರಿಗೆ ಹಣ ಬಿಡುಗಡೆಯಾಗದೆ ತುಂಬಾ ತೊಂದರೆಯಾಗಿರುತ್ತದೆ. ಆದ್ದರಿಂದ ಈ ಬಗ್ಗೆ ಏನು ಕ್ರಮ ವಹಿಸಲಾಗಿದೆ ಎಂಬ ಬಗ್ಗೆ ವಿವರ ನೀಡಬೇಕೆಂದು ಕೋರಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಮಾನ್ಯ ಸದಸ್ಯರುಗಳ ಸಲಹೆಯಂತೆ ಮಾನ್ಯ ಮುಖ್ಯ ಮಂತ್ರಿಗಳು, ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಹಾಗೂ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿ ಸರ್ಕಾರದಿಂದ ಯಾವುದೇ ಕ್ರಮ ವಹಿಸದಿದ್ದಲ್ಲಿ ಮಾನ್ಯ ಮುಖ್ಯ ಮಂತ್ರಿಯವರ ಮನೆ ಮುಂದೆ ಅನಿರ್ಧಿಷ್ಟಾವಧಿ ಧರಣಿಯನ್ನು ಮಾಡಲು ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಹೆಚ್.ಎಸ್.ಶಂಕರ್ ರವರು ಮಾತನಾಡುತ್ತಾ, 2009-10 ಮತ್ತು 2010-11ನೇ ಸಾಲಿನಲ್ಲಿ ಹಾಸನ ಜಿಲ್ಲೆಗೆ ವಿವಿಧ ಇಲಾಖೆಗಳ ಯೋಜನೆಗಳಿಗೆ ಎಷ್ಟು ಅನುದಾನವನ್ನು ನಿಗದಿಪಡಿಸಲಾಗಿದೆ, ಎಷ್ಟು ಹಣ ಬಿಡಗಡೆಯಾಗಿದೆ ಮತ್ತು ಯೋಜನೆಗಳ ಅನುಷ್ಠಾನ ಏಕೆ ವಿಳಂಬವಾಗಿದೆ ಎಂಬ ಬಗ್ಗೆ ವಿವರ ನೀಡಬೇಕೆಂದು ಕೋರಿದರು.<br>ಮುಂದುವರೆದು, ಹಾಸನ ಜಿಲ್ಲೆಗೆ 5054 ಗ್ರಾಮೀಣ ರಸ್ತೆ ಮತ್ತು ಸೇತುವೆ ಹಾಗೂ 3054 ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಹಾಗೂ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. ಹಾಗೂ ದಿ:30-07-2010 ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಸಭೆಯು ಸರ್ವಾನುಮತದಿಂದ ಅಂಗೀಕರಿಸಿತು. |

| | | | |
|---|---|---|---|
| | | ಯೋಜನೆಯಡಿ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಲಾಗಿದೆಯೇ? ಎಂಬ ಬಗ್ಗೆ ವಿವರ ನೀಡಬೇಕೆಂದು ಕೋರಿದರು ಮತ್ತು ಪ್ರೌಢಶಾಲೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲಾದ ಗ್ರೂಪ್ -ಡಿ ನೌಕರರನ್ನು ಸೇವೆಯಿಂದ ವಜಾ ಮಾಡಲಾಗಿದೆ. ಆದರೆ ಸದರಿ ನೌಕರರನ್ನು ಮರು ನೇಮಕ ಮಾಡುವ ಬಗ್ಗೆ ಯಾವ ಕ್ರಮ ವಹಿಸಲಾಗಿದೆ ಎಂಬ ಬಗ್ಗೆ ವಿವರ ನೀಡಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, 12ನೇ ಹಣಕಾಸು ಯೋಜನೆಯಡಿ ಬಾಕಿ ಹಣವನ್ನು ಬಿಡುಗಡೆ ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಗ್ರಾಮೀಣ ಕುಡಿಯುವ ನೀರಿನ ಯೋಜನೆಗೆ ಸಂಬಂಧಿಸಿದಂತೆ, ₹ 998.9ಲಕ್ಷಗಳಿಗೆ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ ಸರ್ಕಾರದ ಅನುಮೋದನೆಗೆ ಸಲ್ಲಿಸಲಾಗಿದ್ದು, ದಿ: 12-08-2010ರಂದು ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ಇವರೊಂದಿಗೆ ಚರ್ಚೆ ಮಾಡಲಾಗಿ ಕುಡಿಯುವ ನೀರಿನ ಯೋಜನೆಗಳ ಕ್ರಿಯಾ ಯೋಜನೆಯ ಬಗ್ಗೆ ಪರಿಶೀಲನೆ ನಡೆಸಿ ಈಗಾಗಲೇ ಅನುಷ್ಠಾನ ಮಾಡಿರುವ ₹ 3.32 ಕೋಟಿಗಳ ಕಾಮಗಾರಿಗಳಿಗೆ ಅನುಮೋದನೆ ನೀಡುವುದಾಗಿ ಭರವಸೆ ನೀಡಿದ್ದಾರೆಂದು ಸಭೆಗೆ ವಿವರ ನೀಡಿದರು. | |
| 2 | ದಿನಾಂಕ: 28-08-2010 ರಂದು ನಡೆದ ಹಣಕಾಸು, ಲೆಕ್ಕಪರಿ ಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡ'ವಳಿಗಳನ್ನು ಅನುಮೋದಿ ಸುವ ವಿಚಾರ | ದಿನಾಂಕ: 28-08-2010 ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಜಿಲ್ಲಾ ಪಂಚಾಯಿತಿ ಅಧ್ಯಕ್ಷರಾದ ಶ್ರೀಮತಿ ಕಾಮಾಕ್ಷಿರಾಜುರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಹೆಚ್.ಅಣ್ಣಪ್ಪ ಶೆಟ್ಟಿರವರು ಅನುಮೋದಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಕೆ.ಎಸ್.ಕುಮಾರಸ್ವಾಮಿರವರು ಮಾತನಾಡುತ್ತಾ, ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯಲ್ಲಿ ಅಕ್ಷರ ದಾಸೋಹ ಯೋಜನೆಯಡಿಯಲ್ಲಿ ಅಡುಗೆ ಮನೆಗಳ ನಿರ್ಮಾಣಕ್ಕೆ ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಮತ್ತು ಯಾವ ಯಾವ ಶಾಲೆಗಳಿಗೆ ಅಡುಗೆ ಮನೆ ನಿರ್ಮಾಣಕ್ಕೆ ಹಣ ಬಿಡುಗಡೆ ಮಾಡಲಾಗಿದೆ ಎಂಬ ಬಗ್ಗೆ ಶಾಲೆಗಳ ಪಟ್ಟಿಯನ್ನು ನೀಡುವಂತೆ ಕೋರಲಾಗಿತ್ತು. ಆದರೆ, ಶಿಕ್ಷಣಾಧಿಕಾರಿ, ಅಕ್ಷರ ದಾಸೋಹ, ಇವರು ಇಲ್ಲಿಯವರೆಗೆ ಶಾಲೆಗಳ ಪಟ್ಟಿಯನ್ನು ನೀಡಿರುವುದಿಲ್ಲ. ಹಾನುಬಾಳು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 220ಕ್ಕೂ ಹೆಚ್ಚಿನ ಮಕ್ಕಳಿದ್ದು, ಅಡುಗೆ ಮನೆ ಇರುವುದಿಲ್ಲ. ಆದ್ದರಿಂದ ಅಕ್ಷರ ದಾಸೋಹದ ವತಿಯಿಂದಾಗಲೀ ಅಥವಾ ನಿರ್ಮಿತಿ ಕೇಂದ್ರದ ವತಿಯಿಂದಾಗಲೀ ಅಡುಗೆ ಮನೆ ನಿರ್ಮಾಣ ಮಾಡಿಕೊಡಬೇಕೆಂದು ಕೋರಿದರು. ಅಲ್ಲದೆ, ನಾಲ್ಕೂವರೆ ವರ್ಷಗಳ ಹಿಂದೆ ನಿರ್ಮಿತಿ ಕೇಂದ್ರದ ವತಿಯಿಂದ ನಿರ್ಮಾಣ ಮಾಡಿರುವ ಅಡುಗೆ ಮನೆ ಕಟ್ಟಡಗಳು ಬೀಳುವ ಸ್ಥಿತಿಯಲ್ಲಿವೆ ಎಂದು ಸಭೆಗೆ ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಪ್ರೇಮಾ ನಿಂಗಪ್ಪರವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಅಡುಗೆ ಮನೆ ಬೇಡವೆಂದು ತಿಳಿಸಿರುವ ಶಾಲೆಗಳ ಪಟ್ಟಿಯನ್ನು ನೀಡಬೇಕೆಂದು ಕೋರಿದರು. | ಸಭೆಯಲ್ಲಿ ವಿವರವಾಗಿ ಚರ್ಚಿಸಿದ ನಂತರ ದಿನಾಂಕ: 28-08-10 ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯು ಸರ್ವಾನುಮತದಿಂದ ಅನುಮೋದಿಸಿತು. |

ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡುತ್ತಾ, ನಾಲ್ಕೂವರೆ ವರ್ಷಗಳ ಹಿಂದೆ ನಿರ್ಮಿತಿ ಕೇಂದ್ರದ ವತಿಯಿಂದ ಸುಮಾರು 350ರಿಂದ 400 ಅಡುಗೆ ಮನೆಗಳನ್ನು ನಿರ್ಮಾಣ ಮಾಡಿರುತ್ತಾರೆ. ನಿರ್ಮಿತಿ ಕೇಂದ್ರಕ್ಕೆ ಮಾನ್ಯ ಜಿಲ್ಲಾಧಿಕಾರಿಯವರು ಅಧ್ಯಕ್ಷರಾಗಿದ್ದು, ಅಡುಗೆ ಮನೆಗಳ ನಿರ್ಮಾಣದಲ್ಲಿ ಅವ್ಯವಹಾರ ನಡೆಸಿದ್ದಾರೆಂದು ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕರ ಮೇಲೆ ಕ್ರಿಮಿನಲ್ ಮೊಖದ್ದಮೆ ಹೂಡಿ ಕ್ರಮ ವಹಿಸಿರುತ್ತಾರೆ. ಆದರೆ, ಹಾಲಿ ಕಾರ್ಯನಿರ್ವಾಹಕ ಅಧಿಕಾರಿಗಳ ಖಾತೆಯಲ್ಲಿ ಸುಮಾರು ₹ 65ರಿಂದ 70 ಲಕ್ಷ ಅನುದಾನ ಇದ್ದು, ಸದರಿ ಅನುದಾನದಲ್ಲಿ ಅಪೂರ್ಣಗೊಂಡಿರುವ ಅಡುಗೆ ಮನೆಗಳನ್ನು ಪೂರ್ಣಗೊಳಿಸಲು ಪರಿಹಾರವನ್ನು ಕಂಡುಹಿಡಿದು, ಮುಂದಿನ ಸಭೆಯ ವೇಳೆಗೆ ಈ ಸಮಸ್ಯೆಯನ್ನು ಬಗೆಹರಿಸಲು ಕ್ರಮ ವಹಿಸಬೇಕೆಂದು ಕೋರಿದರು. ಅನುದಾನ ಲಭ್ಯವಿದ್ದಲ್ಲಿ 90 ಗ್ರೂಪ್-ಡಿ ನೌಕರರನ್ನು ಪ್ರೌಢಶಾಲೆಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.

ಹಾಸನ ನಗರಕ್ಕೆ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಅವಶ್ಯಕತೆ ಹೆಚ್ಚಾಗಿದ್ದು, ತಾಲ್ಲೂಕು ಕೇಂದ್ರಗಳಲ್ಲಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಖಾಲಿ ಉಳಿಯುವ ಸ್ಥಾನಗಳನ್ನು ಹಾಸನ ನಗರಕ್ಕೆ ವರ್ಗಾವಣೆ ಮಾಡಿ ಗ್ರಾಮೀಣ ಭಾಗದಿಂದ ಹಾಸನ ನಗರಕ್ಕೆ ವ್ಯಾಸಂಗಕ್ಕೆ ಬರುವ ವಿದ್ಯಾರ್ಥಿಗಳಿಗೆ ಅವಕಾಶ ಮಾಡಿಕೊಡಬೇಕೆಂದು ಕೋರಿದರು.

ಮಾನ್ಯ ಸದಸ್ಯರಾದ ಶ್ರೀ ಕೆ.ಎಸ್.ಕುಮಾರಸ್ವಾಮಿರವರು ಮಾತನಾಡುತ್ತಾ, ವಿದ್ಯಾರ್ಥಿನಿಲಯ ಹಾಗೂ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಕಟ್ಟಡಗಳ ಕಾಮಗಾರಿಗಳು ಅಪೂರ್ಣಗೊಂಡಿದ್ದು, ಪೂರ್ಣಗೊಳಿಸಲು ಕ್ರಮ ವಹಿಸಬೇಕೆಂದು ಕೋರಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಶಾಲೆಗಳಲ್ಲಿ ಅಡುಗೆ ಮನೆ ನಿರ್ಮಾಣಕ್ಕೆ ಸಂಬಂಧಿಸಿದಂತೆ, ಜಿಲ್ಲೆಯಲ್ಲಿ ಒಟ್ಟು 2808 ಅಡುಗೆ ಮನೆಗಳು ಇದ್ದು, ಪ್ರಸಕ್ತ ಸಾಲಿಗೆ 928 ಶಾಲೆಗಳಿಗೆ ಅಡುಗೆ ಮನೆ ನಿರ್ಮಾಣಕ್ಕೆ ₹ 556.08ಲಕ್ಷಗಳ ಅನುದಾನ ಬಿಡುಗಡೆಯಾಗಿದೆ. ಪ್ರತಿ ಅಡುಗೆ ಮನೆಗೆ ಘಟಕ ವೆಚ್ಚ ₹ 60000/-ಗಳಲ್ಲಿ ನಿರ್ಮಾಣ ಮಾಡಲಾಗುತ್ತಿದೆ. ನಿರ್ಮಿತಿ ಕೇಂದ್ರ ಮತ್ತು ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯವರು ಅಡುಗೆ ಕೋಣೆ ಕಟ್ಟಡಗಳನ್ನು ನಿರ್ಮಾಣ ಮಾಡುತ್ತಿದ್ದಾರೆ. ಕಟ್ಟಡಗಳನ್ನು ಪರಿಶೀಲನೆ ಮಾಡಿದಾಗ ಉತ್ತಮ ಗುಣಮಟ್ಟದಲ್ಲಿ ನಿರ್ಮಾಣ ಮಾಡಿರುವುದಿಲ್ಲ. ಆದರೆ, ಹಾಸನ ನಿರ್ಮಿತಿ ಕೇಂದ್ರದವರು ಈಗ ಯಾವುದೇ ಅಡುಗೆ ಮನೆ ಕಟ್ಟಡಗಳನ್ನು ನಿರ್ಮಾಣ ಮಾಡುತ್ತಿಲ್ಲ.

ಅಲ್ಲದೆ, ಹಾಸನದಲ್ಲಿ ಚಿಕ್ಕಮಗಳೂರು ನಿರ್ಮಿತಿ ಕೇಂದ್ರದ ಅಧಿಕಾರಿಯವರು ಪ್ರಭಾರಿಯಾಗಿ ಕೆಲಸ ನಿರ್ವಹಿಸುತ್ತಿದ್ದಾರೆಂದು ಸಭೆಗೆ ವಿವರ ನೀಡಿದರು. ಜಿಲ್ಲೆಯಲ್ಲಿ 75 ಪ್ರೌಢಶಾಲೆ, 65 ಹಿರಿಯ ಪ್ರಾಥಮಿಕ ಶಾಲೆ ಮತ್ತು 10 ಕಿರಿಯ ಪ್ರಾಥಮಿಕ ಶಾಲೆಗಳಿಗೆ ಅಡುಗೆ ಕೋಣೆಗಳ ಅವಶ್ಯಕತೆ ಇದೆ ಎಂದು ಸಭೆಗೆ ವಿವರ ನೀಡಿದರು.

ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡುತ್ತಾ, ಸರ್ವ ಶಿಕ್ಷಣ ಅಭಿಯಾನದಡಿಯಲ್ಲಿ ಜಿಲ್ಲೆಗೆ ₹ 250.00ರಿಂದ 300.00ಲಕ್ಷಗಳವರೆಗೆ ಅನುದಾನ ಬಿಡುಗಡೆಯಾಗಿದೆ. ಪ್ರಸಕ್ತ ಸಾಲಿಗೆ ಸರ್ವ ಶಿಕ್ಷಣ ಅಭಿಯಾನದಡಿಯಲ್ಲಿ ಎಷ್ಟು ಕಟ್ಟಡಗಳು ಮಂಜೂರಾಗಿವೆ ಎಂಬ ಬಗ್ಗೆ ಜಿಲ್ಲಾ ಪಂಚಾಯಿತಿ ಸದಸ್ಯರ ಗಮನಕ್ಕೆ ತರಲು ಕ್ರಮ ವಹಿಸಬೇಕೆಂದು ಸಭೆಯಲ್ಲಿ ಕೋರಿದರು. ಸರ್ವ ಶಿಕ್ಷಣ ಅಭಿಯಾನ ಕಛೇರಿಯಲ್ಲಿ ಜಿಲ್ಲೆಗೆ ಕೇವಲ ಇಬ್ಬರು ಇಂಜಿನಿಯರುಗಳು ಮಾತ್ರ ಕೆಲಸ ನಿರ್ವಹಿಸುತ್ತಿದ್ದಾರೆ. ಆದ್ದರಿಂದ ಸರ್ವ ಶಿಕ್ಷಣ ಅಭಿಯಾನ ದಡಿ ಅನುಷ್ಠಾನ ಮಾಡುವ ಕಾಮಗಾರಿಗಳಿಗೆ ದೃಡೀಕರಣ ನೀಡಲು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಇಂಜಿನಿಯರುಗಳಿಗೆ ಅಧಿಕಾರ ನೀಡುವುದು ಸೂಕ್ತವೆಂದು ಅಭಿಪ್ರಾಯಪಟ್ಟರು. ಕಟ್ಟಡ ಕಾಮಗಾರಿಗಳಲ್ಲಿ ಬಾಗಿಲು ಕಿಟಕಿಗಳಿಗೆ ಕಬ್ಬಿಣವನ್ನು ಉಪಯೋಗಿಸುತ್ತಿದ್ದು, ಕಬ್ಬಿಣ ತುಕ್ಕು ಹಿಡಿದು ತುಂಡಾಗುತ್ತವೆ. ಆದ್ದರಿಂದ ಕಿಟಕಿ ಮತ್ತು ಬಾಗಿಲುಗಳಿಗೆ ನಂದಿ ಅಥವಾ ಬೇವಿನ ಮರವನ್ನು ಉಪಯೋಗಿಸಲು ಷರತ್ತನ್ನು ಹಾಕಬೇಕೆಂದು ಸಲಹೆ ನೀಡಿದರು.

ಮಾನ್ಯ ಸದಸ್ಯರಾದ ಶ್ರೀ ಕೆ.ಎಸ್.ಕುಮಾರಸ್ವಾಮಿರವರು ಮಾತನಾಡುತ್ತಾ, ಮಳೆಕುಯ್ಲು ಕಾಮಗಾರಿಗಳಡಿಯಲ್ಲಿ ಬಾಕಿ ಉಳಿದಿರುವ ಅನುದಾನವನ್ನು ಮಳೆಕುಯ್ಲು ಕಾಮಗಾರಿಗಳಿಗೆ ವಿನಿಯೋಗಿಸಬಾರದೆಂದು ಕೋರಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಚಿಕ್ಕಮಗಳೂರು ಜಿಲ್ಲೆಯಲ್ಲಿ ನಿರ್ಮಿತಿ ಕೇಂದ್ರದ ಮೂಲಕ ಮಳೆಕುಯ್ಲು ಕಾಮಗಾರಿಗಳನ್ನು ಉತ್ತಮವಾಗಿ ಅನುಷ್ಠಾನ ಮಾಡಲಾಗಿದೆ ಅದೇ ರೀತಿಯಲ್ಲಿ ಬೈಫ್ ಸಂಸ್ಥೆಯ ಮೂಲಕವೂ ಸಹ ಕಾಮಗಾರಿಗಳನ್ನು ಉತ್ತಮವಾಗಿ ಅನುಷ್ಠಾನ ಮಾಡಿರುತ್ತಾರೆ. ಆದ್ದರಿಂದ, ಜಿಲ್ಲೆಯಲ್ಲಿ 100 ಶಾಲೆಗಳನ್ನು ಆಯ್ಕೆ ಮಾಡಲಾಗಿದ್ದು, ಅವುಗಳಲ್ಲಿ ಫ್ಲೋರೈಡ್ ಅಂಶವಿರುವ ಗ್ರಾಮಗಳಲ್ಲಿನ ಶಾಲೆಗಳಿಗೆ ಮಳೆನೀರು ಕುಯ್ಲು ಕಾಮಗಾರಿಗಳನ್ನು ಆದ್ಯತೆ ಮೇಲೆ ಮಾಡಲು ಉದ್ದೇಶಿಸಲಾಗಿದೆ ಎಂದು ಸಭೆಗೆ ವಿವರ ನೀಡಿದರು. ಸರ್ವ ಶಿಕ್ಷಣ ಅಭಿಯಾನದಡಿಯಲ್ಲಿ ಬಿಡುಗಡೆಯಾಗಿರುವ ಅನುದಾನದ ವಿವರ ಹಾಗೂ ಮಂಜೂರಾಗಿರುವ ಶಾಲಾ ಕಟ್ಟಡಗಳ ವಿವರಗಳನ್ನು ಎಲ್ಲಾ ಜಿಲ್ಲಾ ಪಂಚಾಯಿತಿ ಸದಸ್ಯರುಗಳಿಗೆ ತರಬೇಕೆಂದು ಶಿಕ್ಷಣಾಧಿಕಾರಿ, ಸರ್ವ ಶಿಕ್ಷಣ ಅಭಿಯಾನ, ಹಾಸನ ಇವರಿಗೆ ತಿಳಿಸಿದರು ಮತ್ತು ಕಟ್ಟಡ ಕಾಮಗಾರಿಗಳ ಬಗ್ಗೆ ತಾಂತ್ರಿಕ ಸಮಿತಿಯನ್ನು ಕಿರಿಯ ಅಭಿಯಂತರರು, ಸಹಾಯಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ಕಾರ್ಯಪಾಲಕ ಅಭಿಯಂತರರುಗಳನ್ನೊಳಗೊಂಡ ಸಮಿತಿಯನ್ನು ರಚಿಸಿ, ಕಾಮಗಾರಿಗಳ ನ್ಯೂನತೆಗಳ ಬಗ್ಗೆ ಪರಿಶೀಲನೆ ನಡೆಸಿ ವರದಿ ನೀಡುವಂತೆ ತಿಳಿಸಲಾಗುತ್ತದೆ ಮತ್ತು ಉತ್ತಮ ರೀತಿಯಲ್ಲಿ ಮೇಲುಸ್ತುವಾರಿಯನ್ನು ಸಹ ಮಾಡಲು ತಿಳಿಸಲಾಗುವುದೆಂದು ಸಭೆಗೆ ವಿವರ ನೀಡಿದರು.

HCC/SR,

| | | | |
|---|---|---|---|
| | | ಮುಂದುವರೆದು, ಜಿಲ್ಲೆಯಲ್ಲಿ ಅಂಗನವಾಡಿ ಕಟ್ಟಡಗಳನ್ನು ಕರ್ನಾಟಕ ಭೂಸೇನಾ ನಿಗಮದ ವತಿಯಿಂದ ಉತ್ತಮ ಗುಣಮಟ್ಟದಲ್ಲಿ ನಿರ್ಮಾಣ ಮಾಡುತ್ತಿದ್ದಾರೆ. ಪ್ರತಿ ಅಂಗನವಾಡಿ ಕಟ್ಟಡದ ನಿರ್ಮಾಣಕ್ಕೆ ನಬಾರ್ಡ್ ವತಿಯಿಂದ ಘಟಕ ವೆಚ್ಚ ₹ 3.34ಲಕ್ಷಗಳನ್ನು ನಿಗದಿಪಡಿಸಿರುತ್ತಾರೆ. ಆದ್ದರಿಂದ, ತಾಲ್ಲೂಕು ಪಂಚಾಯಿತಿಯಲ್ಲಿ ಪ್ರತಿ ಅಂಗನವಾಡಿ ಕಟ್ಟಡ ನಿರ್ಮಾಣಕ್ಕೆ ವಂತಿಗೆ ರೂಪದಲ್ಲಿ ನಿಗದಿಪಡಿಸಿರುವ ₹.50000/-ಗಳನ್ನು ರಿಪೇರಿಗೆ ಬದಲಾವಣೆ ಮಾಡಿಕೊಡುವಂತೆ ಕೋರಿ ಈಗಾಗಲೇ ಜಿಲ್ಲಾ ಪಂಚಾಯಿತಿ ವತಿಯಿಂದ ಕೇಂದ್ರ ಕಛೇರಿಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಕೇಂದ್ರ ಕಛೇರಿಯ ಹಿರಿಯ ಅಧಿಕಾರಿಗಳು ಆರ್ಥಿಕ ಇಲಾಖೆ ಅನುಮೋದನೆಗೆ ಸಲ್ಲಿಸಲಾಗಿದ್ದು, ಅನುಮೋದನೆ ದೊರಕುವ ನಿರೀಕ್ಷೆಯಿರುವುದಾಗಿ ತಿಳಿಸಿರುತ್ತಾರೆಂದು ಸಭೆಗೆ ವಿವರ ನೀಡಿದರು. | |
| 3 | ದಿನಾಂಕ: 30-08-2010 ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನು ಮೋದಿಸುವ ವಿಚಾರ | ದಿನಾಂಕ: 30-08-2010ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ ಎಸ್.ದ್ಯಾವೇಗೌಡರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಲೋಕನಾಥ್ ರವರು ಸಭೆ ನಡವಳಿಗಳನ್ನು ಅನುಮೋದಿಸಿದರು. | ಸಮಗ್ರ ಚರ್ಚೆಯ ನಂತರ ದಿ: 28-08-2010 ರಂದು ನಡೆದ ಸಾಮಾನ್ಯ ಸ್ಥಾಯಿ ಸಮತಿ ಸಭೆಯ ನಡವಳಿ ಗಳನ್ನು ಸಭೆಯು ಸರ್ವಾನುಮತ ದಿಂದ ಅನುಮೋದಿಸಿತು. |
| 4 | ದಿನಾಂಕ: 28-08-2010ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿ ಗಳನ್ನು ಅನುಮೋದಿಸುವ ಬಗ್ಗೆ. | ದಿ: 28-08-2010ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಮಿತಿಯ ಮಾನ್ಯ ಅಧ್ಯಕ್ಷರಾದ ಶ್ರೀ ಬಿ.ಆರ್.ನೀಲಪ್ಪರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಯು.ಕೆ.ಶಿವನಂಜಪ್ಪರವರು ಸಭೆಯ ನಡವಳಿ ಗಳನ್ನು ಅನುಮೋದಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಎ.ಇ.ಚಂದ್ರಶೇಖರ್ ರವರು ಮಾತನಾಡುತ್ತಾ, ಅಣತಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವೈದ್ಯರು ರಜೆಯನ್ನು ಹಾಕದೆ ಅನಧಿಕೃತವಾಗಿ ಗೈರು ಹಾಜರಾಗಿರುತ್ತಾರೆ. ಇವರ ಮೇಲೆ ಕ್ರಮ ವಹಿಸಬೇಕೆಂದು ಕೋರಿದರು. ಬಾಗೂರು ಪ್ರಾಥಮಿಕ ಕೇಂದ್ರಕ್ಕೆ ವೈದ್ಯರನ್ನು ನೇಮಕ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಹೆಚ್.ಎಸ್.ಕುಮಾರಸ್ವಾಮಿರವರು ಮಾತನಾಡುತ್ತಾ, ಹಳ್ಳಿಮೈಸೂರಿನಲ್ಲಿ ನರ್ಸ್ ನೀಡಿದ ಇಂಜಕ್ಷನ್ ನಿಂದ ಒಬ್ಬ ಬಾಲಕ ಸಾವಿಗೀಡಾಗಿದ್ದು, ಈ ಬಗ್ಗೆ ಆರೋಗ್ಯ ಇಲಾಖೆಯ ಅಧಿಕಾರಿಗಳು ಭೇಟಿ ನೀಡಿರುವುದಿಲ್ಲ. ಈ ಬಗ್ಗೆ ವಿವರ ನೀಡಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಹೆಚ್.ಎಸ್.ಶಂಕರ್ ರವರು ಮಾತನಾಡುತ್ತಾ, ಕೇರಳಾಪುರದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ 2007-08ನೇ ಸಾಲಿನಲ್ಲಿ ಎಕ್ಸರೇ ಯಂತ್ರ ಮಂಜೂರಾಗಿದ್ದು, 2009-10ನೇ ಸಾಲಿನಲ್ಲಿ ಯಂತ್ರವನ್ನು ಅಳವಡಿಸಿರುತ್ತಾರೆ. ಆದರೆ, 35ಕೆವಿ ವಿದ್ಯುತ್ ಬೇಕಾಗಿದ್ದು, ವಿದ್ಯುತ್ ಸರಬರಾಜು ಇಲ್ಲದೆ, ಯಂತ್ರವು ಸಾರ್ವಜನಿಕರ ಉಪಯೋಗಕ್ಕೆ ಬಂದಿರುವುದಿಲ್ಲ. ಆದ್ದರಿಂದ ಈ ಬಗ್ಗೆ ಅಗತ್ಯ ಕ್ರಮ ವಹಿಸಬೇಕೆಂದು ಕೋರಿದರು. | ಸಮಗ್ರ ಚರ್ಚೆಯ ನಂತರ ಸಭೆಯಲ್ಲಿ ಪ್ರಸ್ತಾಪಿಸಿದ ವಿಷಯಗಳ ಬಗ್ಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಹಾಗೂ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ತಿಳಿಸ ಲಾಯಿತು.<br>ದೊಡ್ಡಕುಂಚೇವು ಗ್ರಾಮಕ್ಕೆ ಮಂಜೂರಾಗಿರುವ ಸಮುದಾಯ ಆರೋಗ್ಯ ಕೇಂದ್ರವನ್ನು ಹರಿಹರ ಪುರಕ್ಕೆ ಬದಲಾವಣೆ ಮಾಡಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿ ಸಲು ಸಭೆಯು ಸರ್ವಾನು ಮತದಿಂದ ತೀರ್ಮಾನಿಸಿತು. |

| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀಮತಿ ಮಹದೇವಮ್ಮರವರು ಮಾತನಾಡುತ್ತಾ, ನುಗ್ಗೇಹಳ್ಳಿ ಗ್ರಾಮದಲ್ಲಿ ಸಮುದಾಯ ಆರೋಗ್ಯ ಕೇಂದ್ರವಿದ್ದು, ವೈದ್ಯರುಗಳು ಮತ್ತು ಸಿಬ್ಬಂದಿಯವರ ಕೊರತೆಯಿಂದ ಸಾರ್ವಜನಿಕರಿಗೆ ಅನಾನುಕೂಲವಾಗಿರುತ್ತದೆ. ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br><br>ಮಾನ್ಯ ಸದಸ್ಯರಾದ ಶ್ರೀ ಹೆಚ್.ಡಿ.ರಾಮೇಗೌಡರವರು ಮಾತನಾಡುತ್ತಾ, ದೊಡ್ಡಕುಂಚೇವು ಗ್ರಾಮಕ್ಕೆ ಸಮುದಾಯ ಆರೋಗ್ಯ ಕೇಂದ್ರ ಮಂಜೂರಾಗಿದ್ದು, ಕಾರ್ಯನಿರ್ವಹಿಸುತ್ತಿರುವುದಿಲ್ಲ. ಆದ್ದರಿಂದ, ಸದರಿ ಸಮುದಾಯ ಆರೋಗ್ಯ ಕೇಂದ್ರವನ್ನು ಹರಿಹರಪುರಕ್ಕೆ ಬದಲಾವಣೆ ಮಾಡಿದಲ್ಲಿ ಅನುಕೂಲವಾಗುತ್ತದೆ ಎಂದು ತಿಳಿಸಿದರು.<br><br>ಮಾನ್ಯ ಸದಸ್ಯರಾದ ಶ್ರೀ ಯು.ಕೆ.ಶಿವನಂಜಪ್ಪರವರು ಮಾತನಾಡುತ್ತಾ, ಸಾಲಗಾಮೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ 4 ವೈದ್ಯರು ಇದ್ದು, ಬೈಲಹಳ್ಳಿಯಲ್ಲಿ ವೈದ್ಯರು ಇರುವುದಿಲ್ಲ. ಆದ್ದರಿಂದ, ಸಾಲಗಾಮೆಯಲ್ಲಿ ಕೆಲಸ ನಿರ್ವಹಿಸುತ್ತಿರುವ 4 ವೈದ್ಯರ ಪೈಕಿ ಒಬ್ಬ ವೈದ್ಯರನ್ನು ಬೈಲಹಳ್ಳಿಗೆ ನಿಯೋಜನೆ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.<br><br>ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡುತ್ತಾ, ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಕಟ್ಟಡಗಳು ಮಂಜೂರಾಗದಿದ್ದಲ್ಲಿ ಅಂತಹ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಕಟ್ಟಡಗಳನ್ನು ಮಂಜೂರು ಮಾಡುವಂತೆ ಕೋರಿ ಮಾನ್ಯ ಆರೋಗ್ಯ ಸಚಿವರು, ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಮತ್ತು ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರಿಗೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿದರು.<br><br>ಮಾನ್ಯ ಸದಸ್ಯರಾದ ಶ್ರೀ ಸಿ.ಎಸ್.ಪ್ರಕಾಶ್ ರವರು ಮಾತನಾಡುತ್ತಾ, ನಾಗೇನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ವೈದ್ಯರನ್ನು ನೇಮಕ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು. ಅಲ್ಲದೆ, ನಾಗೇನಹಳ್ಳಿ ಮತ್ತು ಗಂಡೆಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರ ಶುಶ್ರೂಷಕಿಯರ ವಸತಿ ಗೃಹಗಳು ಬಿದ್ದುಹೋಗುವ ಸ್ಥಿತಿಯಲ್ಲಿದ್ದು, ಕಟ್ಟಡಗಳನ್ನು ಬೀಳಿಸಲು ಹರಾಜು ಪ್ರಕ್ರಿಯೆಯನ್ನು ಮಾಡಬೇಕೆಂದು ಕೋರಿದರು.<br><br>ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡುತ್ತಾ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಕಳೆದ ಸಾಲಿನಲ್ಲಿ ಖರೀದಿಸಿರುವ ಎಲ್ಲಾ ಔಷಧಿಗಳು ಉಪಯೋಗಕ್ಕೆ ಬಂದಿವೆಯೇ ಅಥವಾ ಇಲ್ಲವೇ ಎಂಬ ಬಗ್ಗೆ ಪರಿಶೀಲನೆ ನಡೆಸಬೇಕೆಂದು ಕೋರಿದರು ಮತ್ತು ಜಿಲ್ಲೆಗೆ ಅವಶ್ಯಕತೆಯಿರುವ ಔಷಧಿಗಳನ್ನು ಸರಬರಾಜು ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.<br><br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಅನಧಿಕೃತವಾಗಿ ಗೈರು ಹಾಜರಾಗಿರುವ ಅಣತಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರ ಮೇಲೆ ಕ್ರಮ ವಹಿಸಲಾಗಿದೆ ಮತ್ತು ಬಾಗೂರು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಕಾರೇಹಳ್ಳಿಯಲ್ಲಿರುವ ಇಬ್ಬರು ವೈದ್ಯರ ಪೈಕಿ ಒಬ್ಬ ಎಂ.ಬಿ.ಬಿ.ಎಸ್ ವೈದ್ಯರನ್ನು ನಿಯೋಜನೆ ಮಾಡಲು ಕ್ರಮ ವಹಿಸಲಾಗುವುದೆಂದು ತಿಳಿಸಿದರು. ಹಳ್ಳಿಮೈಸೂರು ಗ್ರಾಮದಲ್ಲಿ ಬಾಲಕನ ಸಾವಿಗೆ ಸಂಬಂಧಿಸಿದಂತೆ, ಪರಿಶೀಲನೆ ನಡೆಸಿ ವರದಿ ನೀಡಬೇಕೆಂದು ಈಗಾಗಲೇ ತಿಳಿಸಲಾಗಿದೆ ಎಂದು ಸಭೆಗೆ ವಿವರ ನೀಡಿದರು. ಸಮುದಾಯ ಆರೋಗ್ಯ ಕೇಂದ್ರಕ್ಕೆ ತಜ್ಞ ವೈದ್ಯರ ಅವಶ್ಯಕತೆಯಿದೆ. ಆದರೆ, ಜಿಲ್ಲೆಯಲ್ಲಿ ತಜ್ಞ ವೈದ್ಯರಗಳ ಕೊರತೆಯಿದ್ದು, ಇದು ರಾಜ್ಯಮಟ್ಟದ ಸಮಸ್ಯೆಯಾಗಿರುತ್ತದೆ. ಸ್ಪೆಷಲಿಸ್ಟ್ ಗಳು ದೊರೆಯುತ್ತಿಲ್ಲವಾದ್ದರಿಂದ, ಸರ್ಕಾರದಿಂದ ಆಯ್ಕೆ ಮಾಡಬೇಕಾಗಿರುತ್ತದೆ. ಅರೆ | ಅಕ್ಷರ ದಾಸೋಹ ಕಾರ್ಯ ಕ್ರಮಕ್ಕೆ ಅವಶ್ಯವಿರುವ ತರಕಾರಿಗೆ ಈಗ ನಿಗದಿ ಪಡಿಸಿರುವ ದರವು ಕಡಿಮೆಯಾಗಿದ್ದು, ದರವನ್ನು ಹೆಚ್ಚು ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು.<br><br>ಹಾಗೂ ದಿ: 28-08-2010 ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯು ಸರ್ವಾನು ಮತದಿಂದ ಅನುಮೋದಿಸಿತು. |

ವೈದ್ಯಕೀಯ ಸಿಬ್ಬಂದಿಯವರನ್ನು ಕೆ.ಪಿ.ಎಸ್.ಸಿ ಮೂಲಕ ಆಯ್ಕೆ ಮಾಡಲಾಗುತ್ತಿದ್ದು, ಜಿಲ್ಲೆಗೆ ಪೋಸ್ಟಿಂಗ್ ಮಾಡಿದಲ್ಲಿ ಅವಶ್ಯವಿರುವ ಆರೋಗ್ಯ ಕೇಂದ್ರಗಳಿಗೆ ಅವಶ್ಯ ಸಿಬ್ಬಂದಿಯವರನ್ನು ನೇಮಕ ಮಾಡಲು ಕ್ರಮ ವಹಿಸಲಾಗುವುದೆಂದು ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಹೆಚ್.ಅಣ್ಣಪ್ಪಶೆಟ್ಟಿರವರು ಮಾತನಾಡುತ್ತಾ, ದೇವೇಗೌಡ ನಗರ ಮತ್ತು ಕೃಷ್ಣಾನಗರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಬಡ ಜನರು ವಾಸಿಸುತ್ತಿದ್ದು, ಅಲ್ಲಿಗೆ ಯಾವುದೇ ಮೂಲಭೂತ ಸೌಲಭ್ಯ ಕಲ್ಪಿಸಿರುವುದಿಲ್ಲ. ಅಲ್ಲದೆ, ಅಲ್ಲಿಯ ಜನರಿಗೆ ಮತದಾನದ ಹಕ್ಕನ್ನೂ ಸಹ ನೀಡಿರುವುದಿಲ್ಲ. ಆದ್ದರಿಂದ, ಈ ಬಗ್ಗೆ ಪರಿಶೀಲಿಸಬೇಕೆಂದು ಕೋರಿದರು.

ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡುತ್ತಾ, ಈ ಬಗ್ಗೆ ಮಾನ್ಯ ಶಾಸಕರು, ನಗರ ಸಭೆ ಅಧ್ಯಕ್ಷರು/ಉಪಾಧ್ಯಕ್ಷರು, ಜಿಲ್ಲಾ ಪಂಚಾಯಿತಿ ಸದಸ್ಯರು, ನಗರ ಸಭೆ ಆಯುಕ್ತರು ಪರಿಶೀಲನೆ ನಡೆಸಿ ಏನು ಕ್ರಮ ವಹಿಸಬೇಕೆಂಬ ಬಗ್ಗೆ ಸಮಾಲೋಚಿಸಿ ಕ್ರಮ ವಹಿಸಬೇಕೆಂದು ಕೋರಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಹಾಸನ ನಗರದ ಸುತ್ತಮುತ್ತಲಿನ ಸತ್ಯಮಂಗಲ, ದೇವೇಗೌಡ ನಗರ ಕೃಷ್ಣಾನಗರ ಮೊದಲಾದ ಪ್ರದೇಶಗಳನ್ನು ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಸೇರಿಸಬೇಕೆ ಅಥವಾ ನಗರಸಭಾ ವ್ಯಾಪ್ತಿಗೆ ಸೇರಿಸಬೇಕೆ ಎಂಬ ಬಗ್ಗೆ ಪರಿಶೀಲಿಸಿ ಕ್ರಮ ವಹಿಸಲಾಗುವುದೆಂದು ಇದಕ್ಕೆ ಪ್ರತ್ಯೇಕವಾಗಿ ಮಾನ್ಯ ಶಾಸಕರು ನಗರಸಭೆ ಅಧ್ಯಕ್ಷರು/ ಆಯುಕ್ತರು ಜಿಲ್ಲಾ ಪಂಚಾಯಿತಿ ಸದಸ್ಯರ ಸಭೆಯನ್ನು ನಡೆಸಿ ಕ್ರಮ ವಹಿಸಲಾಗುವುದೆಂದು ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡುತ್ತಾ, ನಗರಸಭೆ ಮತ್ತು ಪುರಸಭೆ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಶಾಲೆಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಿ ಮಕ್ಕಳ ಸಂಖ್ಯಾಬಲವನ್ನು ಹೆಚ್ಚಿಸಲು ಕ್ರಮ ವಹಿಸಬೇಕಾಗಿರುತ್ತದೆ ಎಂದು ತಿಳಿಸಿದರು. ಮತ್ತು ಪ್ರೌಢಶಾಲೆಗಳ ವಿದ್ಯಾರ್ಥಿಗಳಿಗೆ ಸೈಕಲ್ ವಿತರಿಸಲಾಗುತ್ತಿದ್ದು, ಸೈಕಲ್ ಗಳನ್ನು ಶಾಲೆಗಳಲ್ಲಿ ನಿಲ್ಲಿಸಲು ಸಮರ್ಪಕ ಸ್ಥಳಾವಕಾಶವಿಲ್ಲದೆ ಬಿಸಿಲು, ಮಳೆ ಮತ್ತು ಗಾಳಿಯಿಂದ ಸೈಕಲ್ ಗಳು ಹಾಳಾಗುತ್ತಿವೆ. ಆದ್ದರಿಂದ, ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳು ಸೈಕಲ್ ಗಳನ್ನು ನಿಲ್ಲಿಸಲು ಅನುಕೂಲವಾಗುವಂತೆ ಸೈಕಲ್ ಸ್ಟ್ಯಾಂಡ್ ನಿರ್ಮಿಸಲು ಪ್ರಸ್ತಾವನೆಯನ್ನು ಸಲ್ಲಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.

ಮಾನ್ಯ ಸದಸ್ಯರಾದ ಶ್ರೀ ಕೆ.ಎಸ್.ಕುಮಾರಸ್ವಾಮಿರವರು ಮಾತನಾಡುತ್ತಾ, ಕಿರಿಯ ಪ್ರಾಥಮಿಕ ಶಾಲೆಗಳಿಗೆ ಕೇಂದ್ರಸರ್ಕಾರದಿಂದ 4ನೇ ತರಗತಿಯವರೆಗೆ 30 ಮಕ್ಕಳಿಗೆ ಒಬ್ಬ ಶಿಕ್ಷಕರೆಂದು ತೀರ್ಮಾನ ಮಾಡಿರುತ್ತಾರೆ. ಆದರೆ, 1ರಿಂದ 4ನೇ ತರಗತಿಯವರೆಗೆ 30 ಮಕ್ಕಳಿಗೆ ಒಬ್ಬ ಶಿಕ್ಷಕರು ನಿರ್ವಹಣೆ ಮಾಡಲು ಕಷ್ಟಸಾಧ್ಯವಾಗುತ್ತದೆ. ಆದ್ದರಿಂದ, ಕನಿಷ್ಠ ಇಬ್ಬರು ಶಿಕ್ಷಕರನ್ನು ನೇಮಕ ಮಾಡುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.

ಮಾನ್ಯ ಸದಸ್ಯರಾದ ಶ್ರೀ ಹೆಚ್.ಎಸ್.ಶಂಕರ್ ರವರು ಮಾತನಾಡುತ್ತಾ, ಸರ್ಕಾರದಿಂದ ಅನುದಾನಿತ ಶಾಲೆಗಳಿಗೆ ಅನುದಾನವನ್ನು ಬಿಡುಗಡೆ ಮಾಡಿರುವುದಿಲ್ಲ. ಈ ಬಗ್ಗೆ ಏನು ಕ್ರಮ ವಹಿಸಲಾಗಿದೆ ಎಂಬ ಬಗ್ಗೆ ವಿವರ ನೀಡಬೇಕೆಂದು ಕೋರಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿಯಿಂದ ಡ್ರಾಫ್ಟ್ ಪ್ಲಾನಿಂಗ್ ಸಮಯದಲ್ಲಿ ₹.1.50ಕೋಟಿಗಳಿಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತು. ಆದರೆ, ಕೇವಲ ₹.33.00ಲಕ್ಷಗಳ ಅನುದಾನ ಮಾತ್ರ ಬಿಡುಗಡೆಯಾಗಿದೆ. ಮತ್ತೊಮ್ಮೆ ಅಗತ್ಯ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದೆಂದು ವಿವರ ನೀಡಿದರು.

| | | | |
|---|---|---|---|
| | | ಮುಂದುವರೆದು, ಸರ್ಕಾರಿ ಶಾಲೆಗಳಲ್ಲಿ ಜಿಲ್ಲೆಯಲ್ಲಿ ಮಕ್ಕಳ ಸಂಖ್ಯೆಗನುಗುಣವಾಗಿ ಶಿಕ್ಷಕರನ್ನು ನೇಮಕ ಮಾಡಲು ಕ್ರಮ ವಹಿಸಬೇಕೆಂದು ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರಿಗೆ ತಿಳಿಸಿದರು. ಮತ್ತು ಜಿಲ್ಲೆಯಲ್ಲಿ ಎಷ್ಟು ಶಾಲೆಗಳು ಮುಚ್ಚಿವೆ ? ಮಕ್ಕಳ ಸಂಖ್ಯೆ ಎಷ್ಟು ಇವೆ ?ಎಂಬ ಬಗ್ಗೆ ವಿವರ ನೀಡಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣ ರವರು ಮಾತನಾಡುತ್ತಾ, ಜಿಲ್ಲೆಯಲ್ಲಿ 1ರಿಂದ 7ನೇ ತರಗತಿಯವರೆಗೆ ಮಾತ್ರ ಶಾಲೆಗಳು ಮುಚ್ಚುತ್ತಿವೆ. ಆದ್ದರಿಂದ, ಸರ್ವ ಶಿಕ್ಷಣ ಅಭಿಯಾನದಡಿಯಲ್ಲಿ ಶಿಕ್ಷಕರುಗಳಿಗೆ ಸಕಾಲದಲ್ಲಿ ತರಬೇತಿಯನ್ನು ನೀಡಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ನೀಡಲು ಕ್ರಮ ವಹಿಸಬೇಕೆಂದು ಕೋರಿದರು. ಸಮುದಾಯದತ್ತ ಶಾಲೆ ಕಾರ್ಯಕ್ರಮ ಹಮ್ಮಿಕೊಂಡು ಮಕ್ಕಳು ಶಾಲೆಗೆ ಬರುವಂತೆ ಕ್ರಮ ಕೈಗೊಳ್ಳಬೇಕು ಮತ್ತು ಜಿಲ್ಲೆಯಲ್ಲಿ ಪ್ರಾಥಮಿಕ ಮತ್ತು ಮಾಧ್ಯಮಿಕ ಶಾಲೆಗಳು ಮುಚ್ಚದೇ ಇರುವ ರೀತಿಯಲ್ಲಿ ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಉಪಾಧ್ಯಕ್ಷರು ಮಾತನಾಡುತ್ತಾ, 16 ಮಕ್ಕಳಿಗೆ ಇಬ್ಬರು ಶಿಕ್ಷಕರು ಮಾತ್ರ ಇರಬೇಕೆಂದು ಕಾನೂನು ಇದ್ದು, 1ರಿಂದ 5ನೇ ತರಗತಿಯವರೆಗೆ 16 ಮಕ್ಕಳಿಗೆ ಒಬ್ಬ ಶಿಕ್ಷಕರನ್ನು ನೇಮಕ ಮಾಡಿದ್ದು, ಇದರಿಂದ, ಮಕ್ಕಳ ವ್ಯಾಸಂಗಕ್ಕೆ ಅನಾನುಕೂಲವಾಗುತ್ತದೆ ಎಂದು ತಿಳಿಸಿದರು. ಸದಾಶಿವ ಆಯೋಗದ ಶಿಫಾರಸ್ಸಿನಂತೆ ಪರಿಶಿಷ್ಟ ಜಾತಿ/ವರ್ಗಗಳ ಕುಟುಂಬಗಳ ಗಣತಿ ಕಾರ್ಯಕ್ಕೆ ಶಿಕ್ಷಕರನ್ನು ನೇಮಕ ಮಾಡಿದ್ದು, ಇದರಿಂದ, ಶಿಕ್ಷಕರಿಗೆ ತೊಂದರೆಯಾಗಿರುತ್ತದೆ. ಶಿಕ್ಷಕರನ್ನು ಗಣತಿ ಕಾರ್ಯಕ್ಕೆ ಉಪಯೋಗಿಸಬಾರದೆಂದು ಘನ ಸರ್ವೋಚ್ಚ ನ್ಯಾಯಾಲಯದ ತೀರ್ಪು ಇದ್ದರೂ ಸಹ ಗಣತಿಗೆ ಹಾಜರಾಗಿಲ್ಲವೆಂದು ನಗರ ಸಭೆಯಿಂದ ಶಿಕ್ಷಕರನ್ನು ಅಮಾನತ್ತು ಮಾಡಿರುತ್ತಾರೆ. ಆದ್ದರಿಂದ, ಶಿಕ್ಷಕರನ್ನು ಗಣತಿ ಕೆಲಸಕ್ಕೆ ತೆಗೆದುಕೊಳ್ಳಬಾರದೆಂದು ನಿರ್ದೇಶನವನ್ನು ನೀಡಬೇಕೆಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಹೆಚ್.ಅಣ್ಣಪ್ಪಶೆಟ್ಟಿರವರು ಮಾನತಾಡುತ್ತಾ, ಶಿಕ್ಷಕರನ್ನು ಬೇರೆ ಬೇರೆ ಕೆಲಸಗಳಿಗೆ ಬಳಸಿಕೊಳ್ಳಲಾಗುತ್ತಿದ್ದು, ಇದರಿಂದ, ಮಕ್ಕಳ ಪಾಠ ಪ್ರವಚನಕ್ಕೆ ತುಂಬಾ ತೊಂದರೆಯಾಗಿರುತ್ತದೆ. ಆದ್ದರಿಂದ, ಈ ಬಗ್ಗೆ ಸೂಕ್ತ ನಿರ್ದೇಶನವನ್ನು ನೀಡಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಕೆ.ಎಸ್.ಕುಮಾರಸ್ವಾಮಿರವರು ಮಾತನಾಡುತ್ತಾ, ಸಕಲೇಶಪುರ ತಾಲ್ಲೂಕಿನಲ್ಲಿ ಹೆಚ್ಚುವರಿಯಾಗಿ ಇರುವ ಶಿಕ್ಷಕರುಗಳನ್ನು ಬೇರೆ ಶಾಲೆಗಳಿಗೆ ನಿಯೋಜನೆ ಮಾಡುವ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ರಾಷ್ಟ್ರ ಮಟ್ಟದ, ರಾಜ್ಯ ಮಟ್ಟದ ಚುನಾವಣೆ ಕೆಲಸಗಳು, ಮತ್ತು ಜನಗಣತಿ ಕೆಲಸಗಳನ್ನು ಸರ್ಕಾರಿ ನೌಕರರು ಮಾಡಬೇಕಾಗಿರುತ್ತದೆ. ಜನಗಣತಿ ಕೆಲಸದಲ್ಲಿ ಶಿಕ್ಷಕರು ಹೆಚ್ಚಿನ ಪರಿಣಿತಿಯನ್ನು ಪಡೆದಿದ್ದಾರೆ ಆದ್ದರಿಂದ, ಜನಗಣತಿ ಕೆಲಸಕ್ಕೆ ಶಿಕ್ಷಕರುಗಳನ್ನು ಉಪಯೋಗಿಸಿಕೊಳ್ಳಲಾಗುತ್ತಿದೆ. ಆದರೆ, ನಗರ ಸಭೆಯವರು ಜನಗಣತಿ ಕೆಲಸಕ್ಕೆ ಶಿಕ್ಷಕರನ್ನು ತೆಗೆದುಕೊಳ್ಳುವ ಮುಂಚೆ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ರವರ ಗಮನಕ್ಕೆ ತರಬೇಕೆಂದು ತಿಳಿಸಿದರು. ಇನ್ನು ಮುಂದೆ ಈ ರೀತಿ ಆಗದಂತೆ ನಗರಸಭೆ ಅಧಿಕಾರಿಗಳು ಅಗತ್ಯ ಕ್ರಮ ವಹಿಸಬೇಕೆಂದು ತಿಳಿಸಿದರು. | |

ಮುಂದುವರೆದು, ಸಕಲೇಶಪುರ ತಾಲ್ಲೂಕಿನಲ್ಲಿ ಮಾನ್ಯ ಶಾಸಕರು ಮತ್ತು ಜಿಲ್ಲಾ ಪಂಚಾಯಿತಿ ಸದಸ್ಯರೊಂದಿಗೆ ಚರ್ಚಿಸಿ ಶಿಕ್ಷಕರನ್ನು ಕೌನ್ಸಿಲಿಂಗ್ ಮೂಲಕ ನೇಮಕ ಮಾಡಲು ಕ್ರಮ ವಹಿಸಿಬೇಕೆಂದು ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಇವರಿಗೆ ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಹೆಚ್.ಡಿ.ರಾಮೇಗೌಡರವರು ಮಾತನಾಡುತ್ತಾ, ನಗರ ಪ್ರದೇಶಗಳಲ್ಲಿ 10-15 ವರ್ಷಗಳಿಂದ ಒಂದೇ ಕಡೆ ಕೆಲಸ ನಿರ್ವಹಿಸುತ್ತಿರುವ ಶಿಕ್ಷಕರುಗಳನ್ನು ಗ್ರಾಮೀಣ ಪ್ರದೇಶಗಳಿಗೆ ವರ್ಗಾವಣೆ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.

ಮಾನ್ಯ ಉಪಾಧ್ಯಕ್ಷರು ಮಾತನಾಡುತ್ತಾ, ಶಾಲೆಗಳಲ್ಲಿ ಅಕ್ಷರ ದಾಸೋಹ ಕಾರ್ಯಕ್ರಮಕ್ಕೆ ಅವಶ್ಯವಿರುವ ತರಕಾರಿಗೆ ಸರ್ಕಾರ ನಿಗದಿಪಡಿಸಿರುವ ಹಣ ಕಡಿಮೆಯಾಗಿದ್ದು, ಶಿಕ್ಷಕರುಗಳು ತಮ್ಮ ಸ್ವಂತ ಖರ್ಚಿನಲ್ಲಿ ತರಕಾರಿಯನ್ನು ತೆಗೆದುಕೊಂಡು ಹೋಗಬೇಕಾದ ಪರಿಸ್ಥಿತಿ ಇದೆ. ಆದ್ದರಿಂದ, ತರಕಾರಿಗೆ ಹೆಚ್ಚಿನ ಹಣವನ್ನು ನಿಗದಿಪಡಿಸಬೇಕೆಂದು ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿದರು.

ಮಾನ್ಯ ಸದಸ್ಯರಾದ ಶ್ರೀ ಲೋಕನಾಥ್ ರವರು ಮಾತನಾಡುತ್ತಾ, ಸದಾಶಿವ ಆಯೋಗದ ಶಿಫಾರಸ್ಸಿನಂತೆ ಪರಿಶಿಷ್ಟ ಜಾತಿ/ ವರ್ಗಗಳ ಕುಟುಂಬಗಳ ಗಣತಿಯನ್ನು ಸಮರ್ಪಕವಾಗಿ ನಡೆಸಬೇಕೆಂದು ಕೋರಿದರು.

ಮಾನ್ಯ ಸದಸ್ಯರಾದ ಶ್ರೀ ಬಿ.ಜೆ. ಅಪ್ಪಣ್ಣರವರು ಮಾತನಾಡುತ್ತಾ, ಕೊಣನೂರು ಗ್ರಾಮದಲ್ಲಿ ಗ್ರಾಮ ಪಂಚಾಯಿತಿಗೆ ಸೇರಿದ ಕಟ್ಟಡದಲ್ಲಿ ಗ್ರಂಥಾಯವಿರುತ್ತದೆ. ಅದರ ಪಕ್ಕದಲ್ಲಿಯೇ ವೈನ್ ಶಾಪ್ ಇದ್ದು, ಇದರಿಂದ, ಗ್ರಂಥಾಲಯಕ್ಕೆ ಬರುವ ಜನರಿಗೆ ಬಹಳ ತೊಂದರೆಯಾಗಿರುತ್ತದೆ. ಆದ್ದರಿಂದ, ಸದರಿ ವೈನ್ ಶಾಪ್ ಅನ್ನು ಬೇರೆ ಕಡೆಗೆ ವರ್ಗಾಯಿಸಲು ಕ್ರಮ ವಹಿಸಬೇಕೆಂದು ಕೋರಿದರು.

ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡುತ್ತಾ, ಆಶ್ರಯ, ಇಂದಿರಾ ಆವಾಜ್ ಯೋಜನೆಯಡಿ ಮನೆ ನಿರ್ಮಿಸಿಕೊಳ್ಳುವವರಿಗೆ ಕಡ್ಡಾಯವಾಗಿ ಶೌಚಾಲಯ ನಿರ್ಮಾಣ ಮಾಡಲು ಷರತ್ತನ್ನು ಹಾಕಬೇಕೆಂದು ತಿಳಿಸಿದರು. ಶೌಚಾಲಯವನ್ನು ನಿರ್ಮಿಸಿಕೊಳ್ಳದಿದ್ದಲ್ಲಿ ಬಿಲ್ಲನ್ನು ಪಾಸ್ ಮಾಡಬಾರದೆಂದು ಸಲಹೆ ನೀಡಿದರು.

ಮಾನ್ಯ ಎಲ್ಲಾ ಜಿಲ್ಲಾ ಪಂಚಾಯಿತಿ ಸದಸ್ಯರು ಬಿ.ಪಿ.ಎಲ್ ಕುಟುಂಬಗಳಿಗೆ ಸಹಾಯಧನವನ್ನು ನೀಡುವಂತೆ ಎ.ಪಿ.ಎಲ್ ಕುಟುಂಬಗಳನ್ನು ಸಹಾಯಧನವನ್ನು ನೀಡಲು ಪರಿಗಣಿಸಬೇಕೆಂದು ಕೋರಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಸಂಪೂರ್ಣ ಸ್ವಚ್ಛತಾ ಆಂದೋಲನವನ್ನು ಅಕ್ಟೋಬರ್ 02ನೇ ತಾರೀಖಿನಿಂದ ದೊಡ್ಡ ಪ್ರಮಾಣದಲ್ಲಿ ಹಾಸನ ತಾಲ್ಲೂಕಿನಿಂದಲೇ ಪ್ರಾರಂಭ ಮಾಡಲಾಗುತ್ತಿದೆ. ಜಿಲ್ಲೆಯಲ್ಲಿ ಎಲ್ಲಾ ತಾಲ್ಲೂಕುಗಳಲ್ಲಿ ಸಂಪೂರ್ಣ ಸ್ವಚ್ಛತಾ ಆಂದೋಲನ ಕಾರ್ಯಕ್ರಮಕ್ಕೆ ಕ್ರಮ ವಹಿಸಬೇಕೆಂದು ಕಾರ್ಯನಿರ್ವಾಹಕ ಅಧಿಕಾರಿಯವರಿಗೆ ತಿಳಿಸಲಾಗಿದೆ ಎಂದು ವಿವರ ನೀಡಿದರು.

ಮಾನ್ಯ ಸದಸ್ಯರಾದ ಶ್ರೀ ಕೆ.ಎಸ್.ಕುಮಾರಸ್ವಾಮಿರವರು ಮಾತನಾಡುತ್ತಾ, ಗ್ರಾಮ ಪಂಚಾಯಿತಿಗಳಲ್ಲಿರುವ ಶೇ.22.5ರ ಅನುದಾನದಲ್ಲಿ ಪರಿಶಿಷ್ಟ ಜಾತಿ/ವರ್ಗಗಳ ಕುಟುಂಬಗಳಿಗೆ ಶೌಚಾಲಯ ನಿರ್ಮಾಣಕ್ಕೆ ಕ್ರಮ ವಹಿಸಬೇಕೆಂದು ಕೋರಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, 13ನೇ ಹಣಕಾಸು ಯೋಜನೆಯ ಅನುದಾನದಲ್ಲಿ ಶೌಚಾಲಯಗಳ ನಿರ್ಮಾಣ ಮಾಡಲು ಅವಕಾಶವಿದ್ದು, ಈ ಬಗ್ಗೆ ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರುಗಳು ಕ್ರಮ ವಹಿಸಬೇಕೆಂದು ಕೋರಿದರು.

| | | | |
|---|---|---|---|
| 5 | ದಿನಾಂಕ: 31-08-2010ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿ ಗಳನ್ನು ಅನುಮೋದಿ ಸುವ ಬಗ್ಗೆ. | ದಿನಾಂಕ: 31-08-2010ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀಮತಿ ನಂಜಮ್ಮ ಉ: ಕಮಲಮ್ಮ ರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಹೆಚ್.ಎಸ್. ಕುಮಾರಸ್ವಾಮಿರವರು ನಡವಳಿಗಳನ್ನು ಅನುಮೋದಿಸಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಸಾಧನಾದಿವಾಕರರವರು ಮಾತನಾಡುತ್ತಾ, ಸಕಲೇಶಪುರ ತಾಲ್ಲೂಕಿನಲ್ಲಿ ತೋಟಗಾರಿಕೆ ಇಲಾಖೆಯ ವತಿಯಿಂದ ಬೇರು ಕಿತ್ತಳೆ ಗಿಡಗಳನ್ನು ನೀಡುತ್ತಿದ್ದಾರೆ. ಆದರೆ, ಈಗ ಮಳೆಗಾಲ ಮುಕ್ತಾಯವಾಗುತ್ತಿರುವುದರಿಂದ, ಬೇರು ಕಿತ್ತಳೆ ಗಿಡಗಳು ಬದುಕುವುದಿಲ್ಲ. ಆದ್ದರಿಂದ, ಬುಟ್ಟಿ ಕಿತ್ತಳೆ ಗಿಡಗಳನ್ನು ನೀಡಲು ನಿರ್ದೇಶನ ನೀಡಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಜಿ.ಟಿ.ಪುನೀತ್ ಕೃಷ್ಣಮೂರ್ತಿವರು ಮಾತನಾಡುತ್ತಾ, ಹಾಸನ ಜಿಲ್ಲೆಗೆ ನಾಗ್ಪುರ ಕಿತ್ತಳೆ ಗಿಡಗಳು ಹೊಂದಾಣಿಕೆಯಾಗುವುದಿಲ್ಲ ಹಾಗೂ ಹೆಚ್ಚುಕಾಲ ಫಸಲು ಕೊಡುವುದಿಲ್ಲ. ಹಾಸನ ಜಿಲ್ಲೆಗೆ ಕೊಡಗಿನ ಕಿತ್ತಳೆ ಗಿಡಗಳು ಹೊಂದಾಣಿಕೆಯಾಗುತ್ತವೆ. ಅಲ್ಲದೆ, ಕೊಡಗು ಜಿಲ್ಲೆಯ ಜಿಲ್ಲಾ ಪಂಚಾಯಿತಿಯಲ್ಲಿಯೂ ಸಹ ನಾಗ್ಪುರ ಕಿತ್ತಳೆ ಗಿಡಗಳನ್ನು ಸರಬರಾಜು ಮಾಡದಂತೆ ತಡೆಯೊಡ್ಡಿದ್ದಾರೆ. ಆದ್ದರಿಂದ, ಈ ಬಗ್ಗೆ ಕೂಲಂಕುಷವಾಗಿ ಪರಿಶೀಲನೆ ನಡೆಸಿ ಸೂಕ್ತ ಕಿತ್ತಳೆ ಸಸಿಗಳನ್ನು ರೈತರಿಗೆ ನೀಡಲು ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಕೆ.ಎಸ್.ಕುಮಾರಸ್ವಾಗಮಿರವರು ಮಾತನಾಡುತ್ತಾ, ನಾಗ್ಪುರ ಕಿತ್ತಳೆಯ ಕಸಿಗಿಡದಿಂದ 3 ವರ್ಷಕ್ಕೆ ಅಧಿಕ ಫಸಲು ಬರುತ್ತದೆ. ಕೊಡಗಿನ ಕಿತ್ತಲೆ ಗಿಡಗಳು ಪಸಲು ಬಿಡಲು ಸುಮಾರು 8 ವರ್ಷಗಳು ಬೇಕಾಗುತ್ತದೆ. ಸಕಲೇಶಪುರ ತಾಲ್ಲೂಕಿನಲ್ಲಿ ಕಸಿಗಿಡಗಳನ್ನು ನಾಟಿ ಮಾಡಿ ರೈತರು ಯಶಸ್ವಿಯಾಗಿದ್ದಾರೆ. ಬೀಜದ ಗಿಡಗಳು ತುಂಬಾ ಎತ್ತರವಾಗಿ ಬೆಳೆಯುವುದರಿಂದ, ಮಿಶ್ರ ಬೇಸಾಯವನ್ನು ಮಾಡಲು ಸಾಧ್ಯವಾಗುವುದಿಲ್ಲ. ಆದರೆ, ಕಸಿ ಸಸಿಗಳನ್ನು ಬೆಳೆಯುವುದರಿಂದ, ಮಿಶ್ರ ಬೇಸಾಯವನ್ನು ಮಾಡಲು ಸಾಧ್ಯವಾಗುತ್ತದೆ. ಆದ್ದರಿಂದ, ನಾಗ್ಪುರ ತಳಿಯ ಕಿತ್ತಳೆ ಸಸಿಗಳನ್ನು ಸರಬರಾಜು ಮಾಡಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಮಾನ್ಯ ಸದಸ್ಯರಾದ ಶ್ರೀಮತಿ ಸಾಧನಾದಿವಾಕರ, ಶ್ರೀ ಜಿ.ಟಿ.ಪುನೀತ್ ಕೃಷ್ಣಮೂರ್ತಿ, ಶ್ರೀ ಕೆ.ಎಸ್.ಕುಮಾರಸ್ವಾಮಿ ಮತ್ತು ಶ್ರೀ ಸಿ.ಎಸ್.ಪ್ರಕಾಶ್ ರವರು ಪ್ರಸ್ತಾಪಿಸಿರುವ ವಿಷಯದ ಬಗ್ಗೆ ಕೂಲಂಕುಷವಾಗಿ ಪರಿಶೀಲನೆ ನಡೆಸಬೇಕಾಗಿರುತ್ತದೆ. ಅಲ್ಲದೆ, ಹಾಸನ ಜಿಲ್ಲೆಯು ಮೂರು ರೀತಿಯ ವಾತಾವರಣವನ್ನು ಅಂದರೆ, ಮಲೆನಾಡು, ಅರೆಮಲೆನಾಡು ಮತ್ತು ಬಯಲು ಪ್ರದೇಶಗಳನ್ನು ಹೊಂದಿರುವುದರಿಂದ, ಹವಾಮಾನದಲ್ಲಿ ವೈಪರೀತ್ಯವಿದೆ. ಆದ್ದರಿಂದ, ಯಾವ ತಳಿಯ ಕಿತ್ತಳೆಗಿಡಗಳನ್ನು ಸರಬರಾಜು ಮಾಡಿದರೆ ಸೂಕ್ತ ಎಂಬ ಬಗ್ಗೆ ತನಿಖೆ ಮಾಡಿ ವರದಿ ನೀಡುವ ಬಗ್ಗೆ ಜಿಲ್ಲಾ ಜಲಾನಯನ ಅಧಿಕಾರಿಯವರ ನೇತೃತ್ವದಲ್ಲಿ ಒಂದು ಸಮಿತಿಯನ್ನು ರಚನೆ ಮಾಡಲಾಗಿದೆ. ಅಲ್ಲದೆ, ಪ್ರಜಾವಾಣಿ ಪತ್ರಿಕೆಯಲ್ಲಿ ವಿಸ್ತೃತವಾಗಿ ಕಿತ್ತಳೆ ಬೆಳೆಯ ಬಗ್ಗೆ ಬಗ್ಗೆ ವರದಿಯಾಗಿರುತ್ತದೆ. ಆದ್ದರಿಂದ, ಈ ಬಗ್ಗೆ ಇನ್ನು 4-5 ದಿನಗಳ ಒಳಗಾಗಿ | ಸಭೆಯಲ್ಲಿ ಮಾನ್ಯ ಸದಸ್ಯರುಗಳು ಪ್ರಸ್ತಾಪಿಸಿರುವ ವಿಷಯಗಳ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಅಗತ್ಯ ಕ್ರಮವಹಿಸಬೇಕೆಂದುತಿಳಿಸಲಾಯಿತು<br>ಹಾಗೂ ದಿ: 31-08-2010ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿ ಗಳನ್ನು ಸಭೆಯು ಸರ್ವಾನುಮತ ದಿಂದ ಅನುಮೋದಿಸಿತು. |

ಜಿಲ್ಲೆಯಲ್ಲಿ ಯಾವ ಯಾವ ಪ್ರದೇಶಗಳಲ್ಲಿ ಯಾವ ತಳಿಯ ಕಿತ್ತಳೆ ಗಿಡಗಳನ್ನು ನೆಡಬಹುದು ಎಂಬ ಬಗ್ಗೆ ವೈಜ್ಞಾನಿಕವಾಗಿ ತಜ್ಞರಿಂದ ವರದಿ ಪಡೆದು ಗಿಡಗಳನ್ನು ಸರಬರಾಜು ಮಾಡಲು ಕ್ರಮ ವಹಿಸುವುದಾಗಿ ಸಭೆಗೆ ವಿವರ ನೀಡಿದರು.

ಮಾನ್ಯ ಸದಸ್ಯರಾದ ಶ್ರೀ ಜಿ.ಟಿ.ಪುನೀತ್ ಕೃಷ್ಣಮೂರ್ತಿಯವರು ಮಾತನಾಡುತ್ತಾ, ಮೀನುಗಾರಿಕೆ ಇಲಾಖೆಯ ವತಿಯಿಂದ ರೈತರಿಗೆ ಸರಬರಾಜು ಮಾಡುವ ಮೀನುಮರಿಗಳು ಉತ್ತಮ ಗುಣಮಟ್ಟದ್ದಾಗಿರುವುದಿಲ್ಲ. ಮೀನು ಮರಿಗಳು ಒಂದು ವರ್ಷವಾದರೂ ಅರ್ಧ ಕೆ.ಜಿ ಯಷ್ಟು ತೂಕ ಬರುವುದಿಲ್ಲ. ಅರಕಲಗೂಡು ತಾಲ್ಲೂಕಿನ ಹೆಬ್ಬಾಲೆ ಗ್ರಾಮದ ಕೆರೆಯನ್ನು ಕೇವಲ ರೂ.3000/-ಗಳಿಗೆ ಹರಾಜು ಮಾಡಲಾಗಿರುತ್ತದೆ. ಆದರೆ, ಬೇರೆ ಬಿಡ್ಡುದಾರರು ರೂ.10.00ಲಕ್ಷಗಳಿಗೆ ಹರಾಜು ಕೂಗಲು ಸಿದ್ದರಿರುತ್ತಾರೆ. ಆದ್ದರಿಂದ, ಹರಾಜು ಪ್ರಕ್ರಿಯೆಯನ್ನು ತಡೆಹಿಡಿಯಬೇಕೆಂದು ಕೋರಿದರು.

ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡುತ್ತಾ, ಮೀನುಗಾರಿಕೆ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಕೆರೆಗಳಲ್ಲಿ ಹೂಳು ತುಂಬಿದ್ದು, ಹೂಳು ತೆಗೆಯಲು ಕ್ರಮ ವಹಿಸಬೇಕೆಂದು ಕೋರಿದರು.

ಮಾನ್ಯ ಉಪಾಧ್ಯಕ್ಷರು ಮಾತನಾಡುತ್ತಾ, ಮೀನುಗಾರಿಕೆ ಇಲಾಖೆಯು ಸಾರ್ವಜನಿಕರ ಅಭಿವೃದ್ಧಿಗೆ ತೊಡಗಿಸಿಕೊಂಡಿರುವುದಿಲ್ಲ. ಅಲ್ಲದೆ, ಮೀನುಗಾರಿಕೆ ಇಲಾಖೆಗೆ ಯುವಕ ಅಧಿಕಾರಿಗಳು ಬಂದಿದ್ದು, ಅವರಿಂದ, ಹಿರಿಯ ಅಧಿಕಾರಿಗಳು ಸಮರ್ಪಕವಾಗಿ ಕೆಲಸ ತೆಗೆದುಕೊಳ್ಳುತ್ತಿಲ್ಲ. ಆದ್ದರಿಂದ, ಈ ಬಗ್ಗೆ ಪರಿಶೀಲನೆ ನಡೆಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.

ಮಾನ್ಯ ಸದಸ್ಯರಾದ ಶ್ರೀ ಹೆಚ್.ಅಣ್ಣಪ್ಪಶೆಟ್ಟಿ ರವರು ಮಾತನಾಡುತ್ತಾ, ಮೀನುಗಾರಿಕೆ ವೃತ್ತಿ ಅವಲಂಬಿಸಿರುವ ಇತರೆ ಜನಾಂಗದವರಿಗೂ ಸಹ ಮನೆ ಸೌಲಭ್ಯವನ್ನು ನೀಡಲು ಕ್ರಮ ವಹಿಸಬೇಕೆಂದು ಕೋರಿದರು.

ಮಾನ್ಯ ಸದಸ್ಯರಾದ ಶ್ರೀ ಹೆಚ್.ಎಸ್.ಶಂಕರ್ ರವರು ಮಾತನಾಡುತ್ತಾ ಮೀನುಗಾರಿಕೆ ಇಲಾಖೆಯ ವತಿಯಿಂದ 1000 ಮೀನು ಮರಿಗಳೆಂದು ನೀಡುತ್ತಾರೆ. ಆದರೆ, ವಾಸ್ತವವಾಗಿ 280ರಿಂದ 300 ಮರಿಗಳು ಮಾತ್ರ ಇರುತ್ತವೆ. ಆದ್ದರಿಂದ, ಈ ಬಗ್ಗೆ ಇಲಾಖೆಯ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ವಹಿಸಬೇಕೆಂದು ಕೋರಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಮೀನುಗಾರಿಕೆ ಇಲಾಖೆಯ ವ್ಯಾಪ್ತಿಯಲ್ಲಿ 358 ಕೆರೆಗಳಿರುತ್ತವೆ. ಮೀನುಗಾರಿಕೆ ಇಲಾಖೆಯ ವತಿಯಿಂದ ಕೆರೆಗಳ ಹರಾಜು ಸಮರ್ಪಕವಾಗಿ ಆಗುತ್ತಿಲ್ಲ. ರೈತರಿಗೆ ಸರಬರಾಜು ಮಾಡುತ್ತಿರುವ ಮೀನು ಮರಿಗಳ ಗುಣಮಟ್ಟವು ಉತ್ತಮವಾಗಿರುವುದಿಲ್ಲ ಹಾಗೂ ಪ್ರಮಾಣವು ಸಮರ್ಪಕವಾಗಿರುವುದಿಲ್ಲ. ಆದ್ದರಿಂದ, ಮೇಲ್ಕಂಡ ವಿಷಯಗಳ ಬಗ್ಗೆ ಪರಿಶೀಲಿಸಲು ಈ ಬಗ್ಗೆ ಒಂದು ಸಮಿತಿಯನ್ನು ರಚಿಸಲಾಗುವುದು ಎಂದು ಸಭೆಗೆ ವಿವರ ನೀಡಿದರು.

RCC/PSK.

| | | |
|---|---|---|
| | ಮಾನ್ಯ ಉಪಾಧ್ಯಕ್ಷರು ಮಾತನಾಡುತ್ತಾ, ಸಾಮಾಜಿಕ ಅರಣ್ಯ ವಿಭಾಗದಿಂದ ಬೆಳೆಸಿರುವ ಸಸಿಗಳಲ್ಲಿ ಗ್ರಾಮ ಪಂಚಾಯಿತಿಗಳಿಗೆ ಸರಬರಾಜು ಮಾಡಿ ಬಾಕಿ ಉಳಿಯುವ ಸಸಿಗಳಲ್ಲಿ ಕ್ರಿಯಾ ಯೋಜನೆಯಲ್ಲಿ ಸೇರದಿರುವ ಇತರೆ ರೈತರಿಗೆ ವಿತರಣೆ ಮಾಡಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಜಿ.ಟಿ.ಪುನೀತ್ ಕೃಷ್ಣಮೂರ್ತಿಯವರು ಮಾತನಾಡುತ್ತಾ, ಸಾಮಾಜಿಕ ಅರಣ್ಯ ಇಲಾಖೆಯ ವತಿಯಿಂದ ಸಸಿಯನ್ನು ಬೆಳೆಸಲು ಪ್ರತಿ ಸಸಿಗೆ ರೂ.23.00ಗಳು ಖರ್ಚಾಗಿರುತ್ತವೆ ಎಂದು ತಿಳಿದು ಬಂದಿದೆ. ಆದ್ದರಿಂದ, ಸಸಿಗಳನ್ನು ಬೆಳೆಸಲು ಎಷ್ಟು ವೆಚ್ಚ ಮಾಡಲಾಗಿದೆ ಎಂಬ ಬಗ್ಗೆ ವಿವರ ನೀಡಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಬೆಳೆಸಿರುವ ಸಸಿಗಳಲ್ಲಿ ಗ್ರಾಮ ಪಂಚಾಯಿತಿಗಳಿಗೆ ಸರಬರಾಜು ಮಾಡಿ ಉಳಿಕೆಯಾಗುವ ಸಸಿಗಳನ್ನು ಇತರೆ ಫಲಾನುಭವಿಗಳಿಗೆ ನೀಡುವಂತೆ ಮಾನ್ಯ ಜಿಲ್ಲಾ ಪಂಚಾಯಿತಿ ಉಪಾಧ್ಯಕ್ಷರು ಹಾಗೂ ಸದಸ್ಯರುಗಳು ಕೋರಿರುತ್ತಾರೆ. ಈ ಬಗ್ಗೆ ವಿವರಗಳನ್ನು ನೀಡುವಂತೆ ಉಪ ಅರಣ್ಯ ಸಂರಕ್ಷಣಾಧಿಕಾರಿಯವರಿಗೆ ತಿಳಿಸಿದರು.<br>ಉಪ ಅರಣ್ಯ ಸಂರಕ್ಷಣಾಧಿಕಾರಿಯವರು ಮಾತನಾಡುತ್ತಾ, ಸಾಮಾಜಿಕ ಅರಣ್ಯ ವಿಭಾಗ ಮತ್ತು ಪ್ರಾದೇಶಿಕ ಅರಣ್ಯ ವಿಭಾಗದ ವತಿಯಿಂದ ಒಟ್ಟು 75.00ಲಕ್ಷ ಸಸಿಗಳನ್ನು ಬೆಳೆಸಿದ್ದು, ಇಲ್ಲಿಯವರೆಗೆ 56.00ಲಕ್ಷ ಸಸಿಗಳನ್ನು ಗ್ರಾಮ ಪಂಚಾಯಿತಿಗಳಿಗೆ ಸರಬರಾಜು ಮಾಡಲಾಗಿದೆ. ಜಾಬ್ ಕಾರ್ಡ್ ಹೊಂದಿರುವ ,ಪಟ್ಟಿಯಲ್ಲಿ ಸೇರಿರುವ ಹಾಗೂ ಗುಂಡಿಗಳನ್ನು ತೋಡಿಕೊಂಡಿರುವ ಫಲಾನುಭವಿಗಳಿಗೆ ಸಸಿಗಳನ್ನು ವಿತರಣೆ ಮಾಡಲು ಅವಕಾಶವಿರುತ್ತದೆ. ಇತರೆ ಫಲಾನುಭವಿಗಳಿಗೆ ವಿತರಣೆ ಮಾಡಿದಲ್ಲಿ ಸಂಬಂಧಪಟ್ಟ ಗ್ರಾಮ ಪಂಚಾಯಿತಿಯಲ್ಲಿ ವೆಚ್ಚವನ್ನು ಭರಿಸಬೇಕಾಗಿರುತ್ತದೆ ಎಂದು ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಹುಚ್ಚೇಗೌಡರವರು ಮಾತನಾಡುತ್ತಾ, ಫಲಾನುಭವಿಗಳು ಮೊದಲು ಗುಂಡಿಗಳನ್ನು ತೆಗೆದುಕೊಳ್ಳಬೇಕು. ಇಲ್ಲವಾದಲ್ಲಿ ಸಸಿಗಳನ್ನು ನೀಡಬಾರದೆಂದು ಗ್ರಾಮ ಪಂಚಾಯಿತಿಗಳಿಗೆ ತಿಳಿಸಲಾಗಿದೆ. ಒಂದು ವೇಳೆ ಪಟ್ಟಿಯಲ್ಲಿ ಸೇರಿದ ಫಲಾನುಭವಿಗಳು ಗುಂಡಿಗಳನ್ನು ತೆಗೆದುಕೊಳ್ಳದಿದ್ದಲ್ಲಿ ಅವರ ಬದಲಿಗೆ ಗುಂಡಿಗಳನ್ನು ತೆಗೆದುಕೊಳ್ಳುವ ಬೇರೆ ಫಲಾನುಭವಿಗಳಿಗೆ ಸಸಿಗಳನ್ನು ನೀಡುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.<br>ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡುತ್ತಾ, ಮಳೆಗಾಲ ಮುಕ್ತಾಯವಾಗುತ್ತಿರುವುದರಿಂದ, ಇನ್ನು 15 ದಿನಗಳ ಒಳಗಾಗಿ ಸಸಿಗಳನ್ನು ರೈತರಿಗೆ ವಿತರಣೆ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಹೆಚ್.ಡಿ.ರಾಮೇಗೌಡರವರು ಮಾತನಾಡುತ್ತಾ, ಮೊರಾರ್ಜಿ ದೇಸಾಯಿ ವಸತಿ ಶಾಲೆ/ಸರ್ಕಾರಿ ಶಾಲೆಗಳು/ ಆಸ್ಪತ್ರೆಗಳ ಆವರಣದಲ್ಲಿ ಸಸಿಗಳನ್ನು ನೆಡಲು ಕ್ರಮ ವಹಿಸಬೇಕೆಂದು ಕೋರಿದರು ಮತ್ತು ಹರದನಹಳ್ಳಿ ಸಿಗರನಹಳ್ಳಿ ಗ್ರಾಮಗಳ ಮಧ್ಯೆ ಇರುವ ಅರಣ್ಯದಲ್ಲಿ ಗಿಡಗಳನ್ನು ಕಡಿದು ಹಾಕಿರುತ್ತಾರೆ. ಈ ಬಗ್ಗೆ ಪ್ರಾದೇಶಿಕ ಅರಣ್ಯ ವಿಭಾಗ ಮತ್ತು | |

| | | | |
|---|---|---|---|
| | ,, | ಸಾಮಾಜಿಕ ಅರಣ್ಯ ವಿಭಾಗದವರು ಜಂಟಿಯಾಗಿ ಸರ್ವೆ ಮಾಡಿ ಮೊಖದ್ದಮೆಯನ್ನು ಹಾಕಲಾಗಿರುತ್ತದೆ. ಆದರೆ, ಸದರಿ ಮೊಖದ್ದಮೆಯು ಯಾವ ನ್ಯಾಯಾಲಯದಲ್ಲಿದೆ ಮತ್ತು ಯಾವ ಹಂತದಲ್ಲಿದೆ ಎಂಬ ಬಗ್ಗೆ ಸಾಮಾಜಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿಯವರು ವಿವರ ನೀಡಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಹೆಚ್.ಎಸ್.ಶಂಕರ್ ರವರು ಮಾತನಾಡುತ್ತಾ, ಸುವರ್ಣ ಗ್ರಾಮೋದಯ ಯೋಜನೆಯಡಿ ಗ್ರಾಮೀಣ ಅಭ್ಯರ್ಥಿಗಳಿಗೆ ಕಂಪ್ಯೂಟರ್ ತರಬೇತಿ, ಕೌಶಲ್ಯ ತರಬೇತಿಯನ್ನು ಸ್ಥಳೀಯ ಸಂಸ್ಥೆಯವರಿಂದ ನೀಡಬೇಕೆಂದು ಹಿಂದಿನ ಸಭೆಯಲ್ಲಿ ತೀರ್ಮಾನಿಸಲಾಗಿದ್ದು, ಈ ಬಗ್ಗೆ ಯಾವ ಕ್ರಮ ವಹಿಸಲಾಗಿದೆ ಎಂಬ ಬಗ್ಗೆ ವಿವರ ನೀಡಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಎಲ್ಲಾ ಮೂಲಸೌಲಭ್ಯಗಳನ್ನು ಹೊಂದಿದ್ದಲ್ಲಿ ಸ್ಥಳೀಯ ಸಂಸ್ಥೆಯವರಿಂದಲೇ ಕಂಪ್ಯೂಟರ್ ತರಬೇತಿ ಮತ್ತು ಕೌಶಲ್ಯ ತರಬೇತಿಯನ್ನು ನೀಡಲು ಕ್ರಮ ವಹಿಸಲಾಗುವುದೆಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡುತ್ತಾ, ಶಾಂತಿಗ್ರಾಮದ ಕೃಷಿ ವಿಶ್ವವಿದ್ಯಾನಿಲಯದ ಆವರಣದಲ್ಲಿ ನಿರ್ಮಿಸಲಾಗಿರುವ ರೈತ ಭವನದ ಕಾಮಗಾರಿಯು ಅಪೂರ್ಣಗೊಂಡಿರುತ್ತದೆ. ಕಾಮಗಾರಿಯನ್ನು ಪೂರ್ಣಗೊಳಿಸಲು ಅವಶ್ಯ ಅನುದಾನವನ್ನು 2010-11ನೇ ಸಾಲಿನಲ್ಲಿ ಬಿಡುಗಡೆ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು. | ,, |
| 6 | ದಿನಾಂಕ: 30-08-2010 ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ವಿಚಾರ. | ದಿನಾಂಕ: 30-08-2010ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ ಹೆಚ್.ವೈ.ಚಂದ್ರಶೇಖರ್ ರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಪರ್ವತಯ್ಯರವರು ಅನುಮೋದಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಪರ್ವತಯ್ಯರವರು ಮಾತನಾಡುತ್ತಾ, ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಪ್ರಾರಂಭವಾಗಿ 4 ತಿಂಗಳು ಕಳೆದಿದ್ದರೂ ಸಹ ಇಲ್ಲಿಯವರೆಗೆ ಮಾನ್ಯ ಜಿಲ್ಲಾಧಿಕಾರಿಯವರು ಶಿಕ್ಷಕರುಗಳನ್ನು ನೇಮಕ ಮಾಡಿರುವುದಿಲ್ಲ. ಇದರಿಂದ, ಮಕ್ಕಳಿಗೆ ತುಂಬಾ ತೊಂದರೆಯಾಗಿರುತ್ತದೆ. ಆದ್ದರಿಂದ, ಈ ಬಗ್ಗೆ ತ್ವರಿತವಾಗಿ ಕ್ರಮ ವಹಿಸಬೇಕೆಂದು ಕೋರಿದರು. ಇದಕ್ಕೆ ಮಾನ್ಯ ಸದಸ್ಯರಾದ ಶ್ರೀ ಯು.ಕೆ.ಶಿವನಂಜಪ್ಪ ಮತ್ತು ಶ್ರೀ ಸಿದ್ದೇಶ್ವರ ತಮ್ಮಯ್ಯರವರು ಸಹ ತಮ್ಮ ಸಹಮತವನ್ನು ವ್ಯಕ್ತಪಡಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡುತ್ತಾ, ಹೊರಗುತ್ತಿಗೆ ಆಧಾರದ ಮೇಲೆ ಸಮಾಜ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಇಲಾಖೆಯಡಿ ನಡೆಯುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ಅವಶ್ಯವಿರುವ ಶಿಕ್ಷಕರುಗಳನ್ನು ನೇಮಕ ಮಾಡುವ ಬಗ್ಗೆ ಜಿಲ್ಲಾ ಪಂಚಾಯಿತಿಗೆ ಅಧಿಕಾರವನ್ನು ನೀಡಿದಲ್ಲಿ ತ್ವರಿತವಾಗಿ ಶಿಕ್ಷಕರುಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ಕ್ರಮ ವಹಿಸಲಾಗುವುದು. ಆದ್ದರಿಂದ, ಆಡಳಿತಾತ್ಮಕ ಮತ್ತು ಮಕ್ಕಳ ವ್ಯಾಸಂಗದ ಹಿತದೃಷ್ಟಿಯಿಂದ ಹೊರಗುತ್ತಿಗೆ ಆಧಾರದ ಮೇಲೆ ಶಿಕ್ಷಕರನ್ನು ನೇಮಕ ಮಾಡುವ ಅಧಿಕಾರವನ್ನು ಜಿಲ್ಲಾ ಪಂಚಾಯಿತಿಗೆ ನೀಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು. ಇದಕ್ಕೆ ಎಲ್ಲಾ | ಸಮಗ್ರ ಚರ್ಚೆಯ ನಂತರ ದಿನಾಂಕ: 30-08-2010ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯು ಸರ್ವಾನುಮತದಿಂದ ಅನುಮೋದಿಸಿತು.<br>ಹಾಸನ ನಗರಕ್ಕೆ ವಿಜ್ಞಾನ ವಿಷಯ ಓದಲು ಗ್ರಾಮೀಣ ಪ್ರದೇಶದ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಬರುತ್ತಿದ್ದು, ಅವರಿಗೆ ಬಸ್ ಸೌಕರ್ಯ ಸಮರ್ಪಕವಾಗಿಲ್ಲದ ಕಾರಣ ವಿದ್ಯಾಬ್ಯಾಸ ಮುಂದುವರೆಸಲು ಅನುಕೂಲವಾಗುವಂತೆ ಕೇಂದ್ರ |

| | | | |
|---|---|---|---|
| | | ಸದಸ್ಯರುಗಳು ಸಹಮತವನ್ನು ವ್ಯಕ್ತಪಡಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಕೆ.ಎಸ್.ಕುಮಾರಸ್ವಾಮಿರವರು ಮಾತನಾಡುತ್ತಾ, ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ವಿದ್ಯಾರ್ಥಿನಿಲಯಗಳು ಮಂಜೂರಾಗಿ 2 ವರ್ಷಗಳು ಕಳೆದಿದ್ದರೂ ಸಹ ಗ್ಯಾಸ್ ವ್ಯವಸ್ಥೆಯನ್ನು ಕಲ್ಪಿಸಿರುವುದಿಲ್ಲ. ಸೌದೆಯಲ್ಲಿ ಅಡುಗೆಯನ್ನು ಮಾಡಲು ಅನಾನುಕೂಲವಾಗಿದ್ದು, ಹೆಚ್ಚಿನ ವೆಚ್ಚವಾಗುತ್ತಿರುತ್ತದೆ. ಆದ್ದರಿಂದ, ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ವಿದ್ಯಾರ್ಥಿನಿಲಯಗಳಿಗೆ ಗ್ಯಾಸ್ ವ್ಯವಸ್ಥೆಯನ್ನು ಕಲ್ಪಿಸಲು ಕ್ರಮ ವಹಿಸಬೇಕೆಂದು ಕೋರಿದರು.<br>ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಇಲಾಖೆ, ಹಾಸನ ಇವರು ಮಾತನಾಡುತ್ತಾ, ಜಿಲ್ಲೆಯಲ್ಲಿ 20 ವಿದ್ಯಾರ್ಥಿನಿಲಯಗಳು ಮತ್ತು 9 ಮೊರಾರ್ಜಿದೇಸಾಯಿ ವಸತಿ ಶಾಲೆಗಳಿಗೆ ಗ್ಯಾಸ್ ವ್ಯವಸ್ಥೆ ಕಲ್ಪಿಸಬೇಕಾಗಿರುತ್ತದೆ. ಪ್ರತಿ ವರ್ಷ ಕಛೇರಿ ನಿರ್ವಹಣೆಗೆ ನಿಗದಿಪಡಿಸುವ ಅನುದಾನದಲ್ಲಿ ಉಳಿತಾಯವಾಗುವ ಅನುದಾನದಲ್ಲಿ ಗ್ಯಾಸ್ ವ್ಯವಸ್ಥೆ ಕಲ್ಪಿಸಲು ನಿರ್ದೇಶನವಿರುತ್ತದೆ. ಆದರೆ, ಕಳೆದ ಸಾಲಿನಿಂದ ಗ್ಯಾಸ್ ವ್ಯವಸ್ಥೆ ಕಲ್ಪಿಸಲು ಅನುದಾನ ಲಭ್ಯವಿರುವುದಿಲ್ಲವೆಂದು ವಿವರ ನೀಡಿದರು ಮತ್ತು ತಾಲ್ಲೂಕು ಪಂಚಾಯಿತಿ ಕಾರ್ಯಕ್ರಮದಲ್ಲಿ ವಿದ್ಯಾರ್ಥಿನಿಲಯಗಳ ಮೂಲಭೂತ ಸೌಲಭ್ಯ ಕಲ್ಪಿಸಲು ₹ 20.00ಲಕ್ಷಗಳ ಅನುದಾನ ಲಭ್ಯವಿದ್ದು, ಸದರಿ ಅನುದಾನದಲ್ಲಿ ಗ್ಯಾಸ್ ವ್ಯವಸ್ಥೆಯನ್ನು ಕಲ್ಪಿಸಬಹುದಾಗಿರುತ್ತದೆ ಎಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡುತ್ತಾ, ಹಾಸನ ನಗರಕ್ಕೆ ಗ್ರಾಮೀಣ ಪ್ರದೇಶಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ವ್ಯಾಸಂಗಕ್ಕೆಂದು ಬರುತ್ತಿದ್ದು, ಅವರಿಗೆ ಪ್ರಯಾಣ ಮಾಡಿ ವ್ಯಾಸಂಗ ಮಾಡಲು ತೊಂದರೆಯಾಗಿರುವುದರಿಂದ, ತಾಲ್ಲೂಕು ಕೇಂದ್ರಗಳಲ್ಲಿ ಖಾಲಿ ಉಳಿಯುವ ಸ್ಥಾನಗಳನ್ನು ಹಾಸನ ನಗರಕ್ಕೆ ವರ್ಗಾವಣೆ ಮಾಡಿಕೊಂಡು ವಿದ್ಯಾರ್ಥಿಗಳ ವ್ಯಾಸಂಗದ ಹಿತದೃಷ್ಟಿಯಿಂದ ಹಾಸನ ನಗರದಲ್ಲಿ 150 ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವ್ಯಾಸಂಗಕ್ಕೆ ಅನುಕೂಲ ಮಾಡಿಕೊಡಬೇಕೆಂದು ಕೋರಿದರು. ಇದಕ್ಕೆ ಎಲ್ಲಾ ಸದಸ್ಯರುಗಳು ತಮ್ಮ ಸಹಮತವನ್ನು ವ್ಯಕ್ತಪಡಿಸಿದರು.<br>ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಹಾಸನ ಇವರು ಮಾತನಾಡುತ್ತಾ, ಪ್ರಸಕ್ತ ಸಾಲಿಗೆ ಹಾಸನ ಜಿಲ್ಲೆಗೆ 2 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಮಂಜೂರಾಗಿರುತ್ತವೆ ಎಂದು ವಿವರ ನೀಡಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ಶಿಕ್ಷಕರನ್ನು ನೇಮಕ ಮಾಡುವ ಬಗ್ಗೆ ಮಾನ್ಯ ಜಿಲ್ಲಾಧಿಕಾರಿಯವರೊಂದಿಗೆ ಚರ್ಚಿಸಿ ಕ್ರಮ ವಹಿಸುವುದಾಗಿ ತಿಳಿಸಿದರು. ಜಿಲ್ಲೆಯಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ಸ್ವಂತ ಕಟ್ಟಡಗಳ ನಿರ್ಮಾಣಕ್ಕೆ ರಾಜ್ಯ ಮಟ್ಟದಲ್ಲಿ ಟೆಂಡರ್ ಕರೆದು ಕಾಮಗಾರಿಗಳನ್ನು ಅನುಷ್ಠಾನ ಮಾಡುತ್ತಿದ್ದು, ಸ್ಥಳೀಯವಾಗಿ ಮೇಲುಸ್ತುವಾರಿಯನ್ನು ಮಾಡಲು ಸಾಧ್ಯವಾಗದಿರುವುದರಿಂದ, ಕಾಮಗಾರಿಗಳು ಇನ್ನೂ ಪೂರ್ಣಗೊಂಡಿರುವುದಿಲ್ಲ. ಬೇಲೂರು ನಗರದಲ್ಲಿರುವ ಮೊರಾರ್ಜಿದೇಸಾಯಿ ವಸತಿ ಶಾಲೆ ಕಟ್ಟಡ ಮತ್ತು ಅರಕಲಗೂಡು ತಾಲ್ಲೂಕು | ಕಛೇರಿಯ ಘಟನೋತ್ತರ ಮಂಜೂರಾತಿಯನ್ನು ನಿರೀಕ್ಷಿಸಿ ತಾಲ್ಲೂಕು ಕೇಂದ್ರಗಳಲ್ಲಿನ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಖಾಲಿ ಉಳಿಯುವ ಸ್ಥಾನಗಳು ಮತ್ತು ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಉಳಿಯುವ ಸ್ಥಾನಗಳನ್ನು ಹಾಸನ ನಗರಕ್ಕೆ ವರ್ಗಾವಣೆ ಮಾಡಿಕೊಂಡು ಬಾಕಿ ಉಳಿಯುವ ಸ್ಥಾನಗಳಿಗನುಗುಣವಾಗಿ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭ ಮಾಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |

| | | | |
|---|---|---|---|
| | | ದೊಡ್ಡಮಗ್ಗೆ ಗ್ರಾಮದಲ್ಲಿರುವ ಮೊರಾರ್ಜಿದೇಸಾಯಿ ವಸತಿ ಶಾಲೆಗಳ ಕಟ್ಟಡ ಕಾಮಗಾರಿಗಳು ಅಪೂರ್ಣಗೊಂಡಿರುತ್ತವೆ. ಆದ್ದರಿಂದ, ಅಪೂರ್ಣಗೊಂಡಿರುವ ಕಟ್ಟಡ ಕಾಮಗಾರಿಗಳನ್ನು ಪೂರ್ಣಗೊಳಿಸುವ ಬಗ್ಗೆ ಸಂಬಂಧಪಟ್ಟವರ ಗಮನಕ್ಕೆ ತರಬೇಕೆಂದು ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ ಹಾಗೂ ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ, ಹಾಸನ ಇವರಿಗೆ ತಿಳಿಸಿದರು.<br>ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಇಲಾಖೆ, ಹಾಸನ ಇವರು ಉತ್ತರಿಸುತ್ತಾ, ದೊಡ್ಡಮಗ್ಗೆ ಮತ್ತು ಬೇಲೂರು ನಗರದಲ್ಲಿ ನಿರ್ಮಾಣ ಮಾಡುತ್ತಿರುವ ಗುತ್ತಿಗೆದಾರರು ಒಬ್ಬರೇ ಆಗಿದ್ದು, ಸದರಿ ಗುತ್ತಿಗೆದಾರರನ್ನು ಬದಲಾವಣೆ ಮಾಡಿ ಬೇರೆ ಗುತ್ತಿಗೆದಾರರಿಗೆ ಕಾಮಗಾರಿಗಳನ್ನು ವಹಿಸಲಾಗಿರುತ್ತದೆ ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಸಿ.ಎಸ್.ಪ್ರಕಾಶ್ ರವರು ಮಾತನಾಡುತ್ತಾ, ನಗರ ಸಭೆ ಮತ್ತು ಪುರಸಭೆಗಳಲ್ಲಿ ಶೇ.22.5ರ ಅನುದಾನವನ್ನು ಉಪಯೋಗಿಸಿ ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಿ ಅಭಿವೃದ್ಧಿ ಪಡಿಸಬಹುದಾಗಿದ್ದು, ಈ ಬಗ್ಗೆ ಕ್ರಮ ವಹಿಸುವಂತೆ ಸಭೆಯಲ್ಲಿ ನಿರ್ಣಯವನ್ನು ಮಾಡಬೇಕೆಂದು ಕೋರಿದರು. | |
| 7 | 2010-11ನೇ ಸಾಲಿನ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಪರಿಷ್ಕೃತ ವಾರ್ಷಿಕ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವ ಕುರಿತು. | ಟಿಪ್ಪಣಿ ಸಂಖ್ಯೆ: ಜಿಪಂಹಾ/ಅಭಿ(3)553/ಉಖಾಯೋ/2009-10 ದಿನಾಂಕ: 28-08-2010ನ್ನು ಸಭೆಯಲ್ಲಿ ಮಂಡಿಸಲಾಯಿತು.<br>2010-2011ನೇ ಸಾಲಿನ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ವಾರ್ಷಿಕ ಕ್ರಿಯಾ ಯೋಜನೆ (ಕಾರ್ಮಿಕ ಮುಂಗಡ ಆಯವ್ಯಯ) ಯನ್ನು ಗ್ರಾಮ ಪಂಚಾಯಿತಿ/ ತಾಲ್ಲೂಕು ಪಂಚಾಯಿತಿಗಳಿಂದ ಪಡೆದು ದಿನಾಂಕ: 20-02-2010ರ ಜಿಲ್ಲಾ ಪಂಚಾಯಿತಿ ಸಾಮಾನ್ಯ ಸಭೆಯಲ್ಲಿ ₹.14578.276ಲಕ್ಷಗಳಿಗೆ ಅನುಮೋದನೆ ಪಡೆಯಲಾಗಿದ್ದು, ನಂತರ ನಿರ್ದೇಶಕರು, ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ, ಬೆಂಗಳೂರು ಇವರು ಕೇಂದ್ರ ಸರ್ಕಾರ ಹಾಸನ ಜಿಲ್ಲೆಗೆ ಅನುಮೋದಿಸಿರುವ ರೂ.15370.00ಲಕ್ಷಗಳ ಕಾರ್ಮಿಕ ಆಯವ್ಯಯದ ಮೊತ್ತಕ್ಕೆ ಯೋಜನೆಯನ್ನು ರೂಪಿಸಿಕೊಂಡು ಕಾರ್ಯಕ್ರಮವನ್ನು ಅನುಷ್ಠಾನ ಮಾಡಲು ತಿಳಿಸಿರುತ್ತಾರೆ.<br>ಆದುದರಿಂದ, ಈಗಾಗಲೇ ತಯಾರಿಸಲಾಗಿರುವ ₹.14578.276ಲಕ್ಷಗಳನ್ನು ಹೊರತುಪಡಿಸಿ ಉಳಿದ ₹.611.724ಲಕ್ಷಗಳಿಗೆ (ಸರ್ಕಾರವು ಇತ್ತೀಚೆಗೆ ಸೂಚಿಸಿರುವ ಜಲಸಂಪನ್ಮೂಲ ಇಲಾಖೆಯ ಜಿಲ್ಲಾ ಪಂಚಾಯತ್/ ಸಣ್ಣ ನೀರಾವರಿ ಕೆರೆಗಳ ಅಭಿವೃದ್ಧಿ/ ಜೈವಿಕ ಇಂಧನ ಸಸಿಗಳನ್ನು ಬೆಳೆಸುವುದು ಮತ್ತು ವಿವಿಧ ಇಲಾಖೆಗಳ ಕಾರ್ಯಕ್ರಮಗಳೊಂದಿಗೆ ಒಗ್ಗೂಡಿಸಿ( Convergence) ಅನುಷ್ಠಾನ ಮಾಡಬಹುದಾದಂತಹ ಕಾರ್ಯಕ್ರಮಗಳಿಗೆ ವಿನಿಯೋಗಿಸಬಹುದಾಗಿದ್ದು) ಜಿಲ್ಲಾ ಪಂಚಾಯತ್ ಒಪ್ಪಿಗೆ ಪಡೆಯಬೇಕಾಗಿದ್ದು, ವಿಷಯವನ್ನು ಸಾಮಾನ್ಯ ಸಭೆಯ ನಿರ್ಣಯಕ್ಕೆ ಮಂಡಿಸಿದೆ.<br>ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತಡುತ್ತಾ, ಕಳೆದ ಸಾಲಿನಲ್ಲಿ ಗ್ರಾಮ ಪಂಚಾಯಿತಿಗಳಿಂದ ಅನುಷ್ಠಾನ ಮಾಡಿರುವ ಕಾಮಗಾರಿಗಳಿಗೆ ಹಣ ಬಿಡುಗಡೆಯಾಗದೆ ಇರುವುದರಿಂದ, ತುಂಬಾ ತೊಂದರೆಯಾಗಿರುತ್ತದೆ. ಆದ್ದರಿಂದ, ಬಾಕಿ ಹಣವನ್ನು ಬಿಡುಗಡೆ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು. ಇದಕ್ಕೆ ಎಲ್ಲಾ ಸದಸ್ಯರುಗಳು ತಮ್ಮ ಸಹಮತವನ್ನು ವ್ಯಕ್ತಪಡಿಸಿದರು.<br>ಉಪ ಕಾರ್ಯದರ್ಶಿ(ಅಭಿವೃದ್ಧಿ)ರವರು ಮಾತನಾಡುತ್ತಾ, ಕಾಮಗಾರಿಗಳ ಗಣತಿ ಮಾಡಲು ತಿಳಿಸಲಾಗಿದ್ದು, ಕಾಮಗಾರಿ ಗಣತಿ ಕಾರ್ಯ ಮುಗಿದ ಕೂಡಲೇ ಬಾಕಿ ಹಣವನ್ನು ಬಿಡುಗಡೆ ಮಾಡಲು ಕ್ರಮ ವಹಿಸಲಾಗುವುದೆಂದು ತಿಳಿಸಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>2010-2011ನೇ ಸಾಲಿನ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಹಾಸನ ಜಿಲ್ಲೆಗೆ ಕೇಂದ್ರ ಸರ್ಕಾರವರು ಅನುಮೋದಿ ಸಿರುವ ರೂ.15370.00 ಲಕ್ಷಗಳು (ರೂಪಾಯಿ ಹದಿನೈದು ಸಾವಿರದ ಮುನ್ನೂರ ಎಪ್ಪತ್ತು ಲಕ್ಷಗಳು ಮಾತ್ರ)ಗಳ ಕಾರ್ಮಿಕ ಆಯ ವ್ಯಯದ ಮೊತ್ತಕ್ಕೆ ಸಭೆಯು ಸರ್ವಾನುಮತದಿಂದ ಅನುಮೋದನೆ ನೀಡಿತು. |

| | | | |
|---|---|---|---|
| | **ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು** | | |
| | ಹಾಸನ ನಗರದ ವಿಜಯ ನಗರ ಬಡಾವಣೆಯಲ್ಲಿ ಹೊಸದಾಗಿ ಮಂಜೂರಾಗಿರುವ ಪದವಿ ಪೂರ್ವ ಕಾಲೇಜಿಗೆ ಅಗತ್ಯ ಜಮೀನನ್ನು ಹಂಚಿಕೆ ಮಾಡುವ ಬಗ್ಗೆ | ಮಾನ್ಯ ಸದಸ್ಯರಾದ ಶ್ರೀ ಹೆಚ್.ಅಣ್ಣಪ್ಪಶೆಟ್ಟರವರು ಮಾತನಾಡುತ್ತಾ, ಹಾಸನ ನಗರದ ವಿಜಯನಗರ ಬಡಾವಣೆಗೆ ಪದವಿಪೂರ್ವ ಕಾಲೇಜು ಮಂಜೂರಾಗಿದ್ದು, ಸದರಿ ಕಾಲೇಜಿಗೆ ಕಟ್ಟಡ ನಿರ್ಮಾಣಕ್ಕಾಗಿ ₹.25.00ಲಕ್ಷ ಅನುದಾನ ಕೂಡಾ ಮಂಜೂರಾಗಿರುತ್ತದೆ. ಆದರೆ, ಸ್ಥಳ ದೊರಕಿರುವುದಿಲ್ಲ. ಗುಡ್ಡೇನಹಳ್ಳಿ ಸರ್ವೆ ನಂ.82ರಲ್ಲಿ ಗಂಗಾ ಕಾಫಿ ಕ್ಯೂರಿಂಗ್ ಅವರಿಂದ 100 ಎಕರೆ ಜಮೀನನ್ನು ಸರ್ಕಾರವು ವಶಪಡಿಸಿಕೊಂಡಿದ್ದು, ಸದರಿ ಜಮೀನಿನಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಸರ್ಕಾರಿ ವಿಜ್ಞಾನ ಕೇಂದ್ರಕ್ಕೆ 22.30 ಎಕರೆ ಜಮೀನನ್ನು ಹಂಚಿಕೆ ಮಾಡುವಂತೆ ಮಾನ್ಯ ಜಿಲ್ಲಾಧಿಕಾರಿಯವರಿಗೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಸದರಿ ಜಮೀನಿನಲ್ಲಿ ವಿಜಯನಗರ ಬಡಾವಣೆಗೆ ಮಂಜೂರಾಗಿರುವ ಪದವಿ ಪೂರ್ವ ಕಾಲೇಜಿಗೆ ಅವಶ್ಯ ಜಮೀನನ್ನು ನೀಡುವಂತೆ ಕೋರಿ ಮಾನ್ಯ ಜಿಲ್ಲಾಧಿಕಾರಿಯವರಿಗೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿದರು. | ಸಭೆಯಲ್ಲಿ ವಿವರವಾಗಿ ಚರ್ಚಿಸಿದ ನಂತರ, ಹಾಸನ ನಗರದ ವಿಜಯನಗರ ಬಡಾವಣೆಗೆ ಮಂಜೂರಾಗಿರುವ ಪದವಿ ಪೂರ್ವ ಕಾಲೇಜಿಗೆ ಕಟ್ಟಡ ನಿರ್ಮಾಣ ಮಾಡಲು ಗುಡ್ಡೇನಹಳ್ಳಿ ಗ್ರಾಮದ ಸರ್ವೆ ನಂ.82ರಲ್ಲಿ ಅವಶ್ಯ ಜಮೀನನ್ನು ನೀಡುವಂತೆ ಕೋರಿ ಮಾನ್ಯ ಜಿಲ್ಲಾಧಿಕಾರಿಯವರಿಗೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| 2 | ಲೋಕೋಪಯೋಗಿ ಇಲಾಖೆಯ ವತಿಯಿಂದ ರಸ್ತೆಯ ಗುಂಡಿಗಳನ್ನು ಮುಚ್ಚುವಂತೆ ಮತ್ತು ಅಕ್ಕ ಪಕ್ಕದ ಜಂಗಲ್ ಗಳನ್ನು ಕಡಿದು ಸ್ವಚ್ಛ ಮಾಡುವಂತೆ ಮತ್ತು ಪದವಿ ಪೂರ್ವ ಕಾಲೇಜು ಹಾಗೂ ಪ್ರಥಮ ದರ್ಜೆ ಕಾಲೇಜು ಕಟ್ಟಡ ಗಳನ್ನು ನಿರ್ಮಿಸಲು ಅನುದಾನವನ್ನು ಬಿಡುಗಡೆ ಮಾಡುವಂತೆ - ಕೋರಿ ಪ್ರಸ್ತಾವನೆಯನ್ನು ಸಲ್ಲಿಸುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡುತ್ತಾ, ಪ್ರೌಢಶಾಲಾ ಮಕ್ಕಳಿಗೆ ಶಿಕ್ಷಣ ಇಲಾಖೆಯ ವತಿಯಿಂದ ಬೈಸಿಕಲ್ ಗಳನ್ನು ನೀಡಲಾಗಿದೆ. ಆದರೆ, ಗ್ರಾಮೀಣ ರಸ್ತೆಗಳಲ್ಲಿ ತುಂಬಾ ಗುಂಡಿಗಳು ಆಗಿದ್ದು, ರಸ್ತೆಯ ಅಕ್ಕಪಕ್ಕದಲ್ಲಿ ಜಂಗಲ್ ಗಳು ಬೆಳೆದು ಮಕ್ಕಳು ಶಾಲೆಗೆ ಬರಲು ತೊಂದರೆಯಾಗಿರುತ್ತದೆ. ಆದ್ದರಿಂದ, ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ರಸ್ತೆಗಳ ಗುಂಡಿಗಳನ್ನು ಮುಚ್ಚಲು ಮತ್ತು ಜಂಗಲ್ ಗಳನ್ನು ಕಡಿದು ಸ್ವಚ್ಛ ಮಾಡುವಂತೆ ಹಾಗೂ ಜಿಲ್ಲೆಯಲ್ಲಿ ಹೊಸದಾಗಿ ಪ್ರಾರಂಭವಾಗಿರುವ ಪದವಿ ಪೂರ್ವ ಕಾಲೇಜು ಹಾಗೂ ಪ್ರಥಮ ದರ್ಜೆ ಕಾಲೇಜಿಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಅವಶ್ಯ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ, ಹಾಸನ ಇವರಿಗೆ ಪ್ರಸ್ತಾವನೆಯನ್ನು ಸಲ್ಲಿಸಬೇಕೆಂದು ಕೋರಿದರು.<br>ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯಿತಿ ಹಾಸನ ಇವರು 2010-11ನೇ ಸಾಲಿನಲ್ಲಿ 2702 ಕೆರೆ ಅಭಿವೃದ್ಧಿ ಯೋಜನೆಯಡಿಯಲ್ಲಿ ನಿಗದಿಯಾಗಿರುವ ಅನುದಾನಕ್ಕಿಂತ ಹೆಚ್ಚುವರಿಯಾಗಿ ₹.20.00ಲಕ್ಷಗಳ ಅನುದಾನಕ್ಕೆ ತಯಾರಿಸಿರುವ ಕ್ರಿಯಾ ಯೋಜನೆಗೆ ಅನುಮತಿ ನೀಡಬೇಕೆಂದು ಕೋರಿದರು. | ಸಭೆಯಲ್ಲಿ ಚರ್ಚಿಸಿದ ನಂತರ, ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ರಸ್ತೆಗಳ ಗುಂಡಿಗಳನ್ನು ಮುಚ್ಚಲು ಮತ್ತು ಜಂಗಲ್ ಗಳನ್ನು ಕಡಿದು ಸ್ವಚ್ಛ ಮಾಡಲು ಹಾಗೂ ಜಿಲ್ಲೆಯಲ್ಲಿ ಹೊಸದಾಗಿ ಪ್ರಾರಂಭವಾಗಿರುವ ಪದವಿ ಪೂರ್ವ ಕಾಲೇಜು ಹಾಗೂ ಪ್ರಥಮ ದರ್ಜೆ ಕಾಲೇಜಿಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಅವಶ್ಯ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ, ಬೆಂಗಳೂರು ಇವರಿಗೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು.<br>2010-11ನೇ ಸಾಲಿಗೆ 2702 ಕೆರೆ ಅಭಿವೃದ್ಧಿ ಯೋಜನೆಯಡಿ ನಿಗದಿಯಾದ ಅನುದಾನಕ್ಕೆ ಕ್ರಿಯಾ ಯೋಜನೆ ತಯಾರಿಸಿದ್ದು, ಹೆಚ್ಚುವರಿಯಾಗಿ ತಯಾರಿಸಿರುವ ₹.20.00 ಲಕ್ಷಗಳ ಅನುದಾನಕ್ಕೆ ಆದ್ಯತೆ ಮೇಲೆ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |

| | | | |
|---|---|---|---|
| 3 | ಗ್ರಾಮ ಪಂಚಾಯಿತಿ ಬಿಲ್ ಕಲೆಕ್ಟರ್ ಗಳಿಗೆ ಮುಂಬಡ್ತಿ ನೀಡುವ ಬಗ್ಗೆ | ಮಾನ್ಯ ಸದಸ್ಯರಾದ ಶ್ರೀ ಸಿ.ಎನ್.ಬಾಲಕೃಷ್ಣರವರು ಮಾತನಾಡುತ್ತಾ, ಗ್ರಾಮ ಪಂಚಾಯಿತಿಗಳಲ್ಲಿ ಕರ ವಸೂಲಿಗಾರರು, ಗುಮಾಸ್ತರು ಇತ್ಯಾದಿ ವೃಂದದ ನೌಕರರು ಸುಮಾರು 15-20 ವರ್ಷಗಳಿಂದ ಮಂಡಲ ಪಂಚಾಯಿತಿ ಕಾಲದಿಂದಲೂ ಕೆಲಸ ಮಾಡುತ್ತಾ ಬಂದಿರುತ್ತಾರೆ. ಅವರಿಗೆ ಯಾವ ಸೌಲಭ್ಯಗಳು ಇರುವುದಿಲ್ಲ. ವಯಸ್ಸು ಸಹ ಮೀರುತ್ತಿದೆ.<br>ಪ್ರಸ್ತುತ ಗ್ರಾಮ ಪಂಚಾಯಿತಿಗಳ ಕಾರ್ಯ ಜವಾಬ್ದಾರಿ ಹೆಚ್ಚಾಗುತ್ತಿವೆ. ಜಿಲ್ಲೆಯಲ್ಲಿ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಅನೇಕ ವರ್ಷಗಳಿಂದ ಹುದ್ದೆಗಳನ್ನು ಖಾಲಿ ಇಡಲಾಗಿದೆ. ಉದ್ಯೋಗ ಖಾತರಿ ಯೋಜನೆ, ಕುಡಿಯುವ ನೀರು, ವಸತಿ ಕಾರ್ಯಕ್ರಮ, ಸಂಪೂರ್ಣ ಸ್ವಚ್ಚತಾ ಆಂದೋಲನ ಇತ್ಯಾದಿ ಹತ್ತು ಹಲವಾರು ಕೆಲಸಗಳನ್ನು ಪಂಚಾಯಿತಿಯು ನಿರ್ವಹಿಸಬೇಕಾಗಿರುತ್ತದೆ. ಈ ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳನ್ನು ಪ್ರಭಾರಿ ವ್ಯವಸ್ಥೆಯಲ್ಲಿ 2-3 ಗ್ರಾಮ ಪಂಚಾಯಿತಿಗಳನ್ನು ನೀಡಿದ್ದು, ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು ಈ ಕೆಲಸಗಳನ್ನು ಸರಿಯಾಗಿ ನಿರ್ವಹಿಸದೇ ಇರುವುದರಿಂದ, ಪಂಚಾಯಿತಿ ಅಭಿವೃದ್ಧಿ ಕುಂಠಿತವಾಗಿರುತ್ತದೆ. ಗ್ರಾಮ ಪಂಚಾಯಿತಿಗಳಲ್ಲಿ ಈ ರೀತಿ ಪ್ರಭಾರಿ ವ್ಯವಸ್ಥೆಯಿಂದ ಪಂಚಾಯಿತಿ ಕಾರ್ಯದರ್ಶಿಗಳು ಸರಿಯಾಗಿ ಉಸ್ತುವಾರಿ ಮಾಡದೆ ಇರುವುದರಿಂದ, ದಾಖಲಾತಿಗಳನ್ನು ಸಹ ಸರಿಯಾಗಿ ನಿರ್ವಹಿಸದೇ ಸಾರ್ವಜನಿಕರಿಗೂ ತೊಂದರೆ ಉಂಟಾಗಿರುತ್ತದೆ. ಆದ್ದರಿಂದ, ಗ್ರಾಮೀಣ ಅಭಿವೃದ್ಧಿ, ಜನರ ತೊಂದರೆ ನಿವಾರಣೆ ಹಾಗು ಆಡಳಿತದ ಕಾರಣದಿಂದ ಈ ಎಲ್ಲಾ ಗ್ರಾಮ ಪಂಚಾಯಿತಿಗಳ ಕಾರ್ಯದರ್ಶಿಗಳ ಹುದ್ದೆಗಳನ್ನು ತುಂಬುವುದು ಅನಿವಾರ್ಯವಾಗಿರುತ್ತದೆ. ವಿಕೇಂದ್ರೀಕರಣದ ಮೂಲ ತತ್ವ ಸರಿಯಾಗಿ ಜನರಿಗೆ ಸಿಗಬೇಕಾದರೆ, ಗ್ರಾಮ ಪಂಚಾಯಿತಿಯಲ್ಲಿ ಎಲ್ಲಾ ಸಿಬ್ಬಂದಿಗಳು ಇರಲೇಬೇಕು. ಸಿಬ್ಬಂದಿ ಇಲ್ಲದೆ ಜನರ ಕೆಲಸ ಸಾಗುವುದು ಕಷ್ಟ. ಆದ್ದರಿಂದ, ಖಾಲಿ ಇರುವ ಗ್ರಾಮ ಪಂಚಾಯಿತಿಯ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲು ಆಗ್ರಹಿಸಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಖಾಲಿ ಇರುವ ಹುದ್ದೆಗಳನ್ನು ಕರ ವಸೂಲಿಗಾರರು ಹಾಗೂ ಇತರರಿಂದ ತುಂಬುವುದು ಅವಶ್ಯಕತೆ ಇದೆಯೆಂದು ತಿಳಿಸಿದರು. | ಸಭೆಯು ಈ ಬಗ್ಗೆ ವಿವರವಾಗಿ ಚರ್ಚಿಸಿತು. ಕೂಡಲೇ ಖಾಲಿ ಇರುವ ಗ್ರೇಡ್ -2 ಗ್ರಾಮ ಪಂಚಾಯಿತಿಗಳಿಗೆ, ಕರ ವಸೂಲಿಗಾರರು ಹಾಗೂ ಇತರೆ ವೃಂದಗಳಿಂದ ನೇಮಕ ಮಾಡಲು ಗ್ರೇಡ್ -1 ಗ್ರಾಮ ಪಂಚಾಯಿತಿಗಳಿಗೆ ಗ್ರೇಡ್ -2 ಕಾರ್ಯದರ್ಶಿಗಳನ್ನು ಪದೋನ್ನತಿ ಗೊಳಿಸಲು ಸರ್ವಾನುಮತದಿಂದ ಸಭೆಯು ತೀರ್ಮಾನಿಸಿತು. |
| 4 | 2010-11ನೇ ಸಾಲಿಗೆ ಎಸ್.ಜಿ.ಎಸ್.ವೈ ಯೋಜನೆಯಡಿ ರೂ.1.50 ಕೋಟಿ | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, 2010-11ನೇ ಸಾಲಿಗೆ ಎಸ್.ಜಿ.ಎಸ್.ವೈ ಯೋಜನೆಯಡಿ ಜಿಲ್ಲಾ ಕೇಂದ್ರದಲ್ಲಿ ಮಾರಾಟ ಮಳಿಗೆಯನ್ನು ನಿರ್ಮಿಸಲು ₹.1.50ಕೋಟಿ ಅನುದಾನವನ್ನು ಮಂಜೂರು ಮಾಡಿದ್ದು, ಸದರಿ ಅನುದಾನದಲ್ಲಿ ದಿನಾಂಕ: 17-07- | ಸಭೆಯಲ್ಲಿ ಚರ್ಚಿಸಿದ ನಂತರ, ಪ್ರಸಕ್ತ ಸಾಲಿಗೆ ಎಸ್.ಜಿ.ಎಸ್.ವೈ ಯೋಜನೆಯಡಿ ಮಂಜೂರಾಗಿರುವ ಮಾರಾಟ ಮಳಿಗೆಯನ್ನು ಹಾಸನ ನಗರದ ಚನ್ನಪಟ್ಟಣದ ಕರ್ನಾಟಕ ಗೃಹ ಮಂಡಳಿಯ |

| | | | |
|---|---|---|---|
| | ಗಳಲ್ಲಿ ಮಾರಾಟ ಮಳಿಗೆಯನ್ನು ನಿರ್ಮಿಸುವ ಬಗ್ಗೆ. | 2010ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯಲ್ಲಿ ವಯಸ್ಕರ ಶಿಕ್ಷಣ ಇಲಾಖೆಯ ಕಛೇರಿಯು ನಡೆಯುತ್ತಿರುವ ಸ್ಥಳದಲ್ಲಿ ನಿರ್ಮಿಸಲು ತೀರ್ಮಾನಿಸಲಾಗಿತ್ತು. ಆದರೆ, ಸದರಿ ಜಾಗವು ಮಾರಾಟ ಮಳಿಗೆಯನ್ನು ನಿರ್ಮಿಸಲು ಚಿಕ್ಕದಾಗುವುದರಿಂದ, ಅದರ ಬದಲಿಗೆ ಈಗ ಚನ್ನಪಟ್ಟಣದ ಕರ್ನಾಟಕ ಗೃಹ ಮಂಡಳಿಯ ವಾಣಿಜ್ಯ ಉದ್ದೇಶಕ್ಕೆ ಮೀಸಲಿರಿಸಿರುವ ಉತ್ತಮ ಸ್ಥಳದಲ್ಲಿ ರೂ.1.50ಕೋಟಿಗಳ ವೆಚ್ಚದಲ್ಲಿ ಮಾರಾಟ ಮಳಿಗೆಯನ್ನು ನಿರ್ಮಿಸಲು ಸಭೆಯು ಅನುಮೋದನೆ ನೀಡಬೇಕೆಂದು ಕೋರಿದರು.<br>ಮುಂದುವರೆದು, ಎಸ್.ಜಿ.ಎಸ್.ವೈ ಯೋಜನೆಯಡಿ ಹಾಸನ ತಾಲ್ಲೂಕಿನಲ್ಲಿ ಸಾಮರ್ಥ್ಯ ಸೌಧವನ್ನು ನಿರ್ಮಿಸಿರುವುದಿಲ್ಲ ಮತ್ತು ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ರಾಜೀವ್ ಗಾಂಧಿ ಮಾಹಿತಿ ಸೇವಾ ಕೇಂದ್ರವನ್ನು ನಿರ್ಮಿಸಬೇಕಾಗಿರುತ್ತದೆ. ಆದ್ದರಿಂದ, ವಯಸ್ಕರ ಶಿಕ್ಷಣ ಇಲಾಖೆಯ ಕಛೇರಿ ನಡೆಯುತ್ತಿರುವ ಜಾಗದಲ್ಲಿ ಎಸ್.ಜಿ.ಎಸ್.ವೈ ಯೋಜನೆಯಡಿ ಸಾಮರ್ಥ್ಯ ಸೌಧ ಮತ್ತು ರಾಜೀವ್ ಗಾಂಧಿ ಮಾಹಿತಿ ಕೇಂದ್ರದ ಕಟ್ಟಡವನ್ನು , ಸಭಾಂಗಣ, ವಿಡಿಯೋ ಕಾನ್ಫರೆನ್ಸ್ ಹಾಲ್, ಮಾಹಿತಿ ಕೇಂದ್ರ ಮತ್ತು ವಾಹನ ನಿಲುಗಡೆ ಸ್ಥಳಗಳನ್ನು ಒಳಗೊಂಡಂತೆ ಸುಸಜ್ಜಿತ ಕಟ್ಟಡವನ್ನು ನಿರ್ಮಿಸಲು ಸಭೆಯು ಅನುಮೋದನೆ ನೀಡಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಪ್ರೇಮಾ ನಿಂಗಪ್ಪರವರು ಮಾತನಾಡುತ್ತಾ, ಗೊಲ್ಲರಹಟ್ಟಿ ತಾಂಡ್ಯದಲ್ಲಿ ಸುಮಾರು 15 ಸ್ವಸಹಾಯ ಸಂಘ ಮತ್ತು ಸ್ತ್ರೀ ಶಕ್ತಿ ಸಂಘಗಳು ರಚನೆಯಾಗಿದ್ದು, ಅವುಗಳಲ್ಲಿ ಕೇವಲ 2 ಸ್ವಸಹಾಯ ಸಂಘಗಳಿಗೆ ಮಾತ್ರ ಕಾರ್ಪೋರೇಷನ್ ಬ್ಯಾಂಕಿನವರು ಸಾಲವನ್ನು ನೀಡುತ್ತಿದ್ದು, ಉಳಿದ ಸ್ವಸಹಾಯ ಸಂಘಗಳಿಗೆ ಸಾಲ ಸೌಲಭ್ಯವನ್ನು ನೀಡುತ್ತಿಲ್ಲ ಮತ್ತು ಸಂಘಗಳ ಸದಸ್ಯರುಗಳನ್ನು ಬ್ಯಾಂಕಿನಿಂದ ಹೊರಗಡೆ ನಿಲ್ಲಿಸುತ್ತಿದ್ದಾರೆ. ಆದ್ದರಿಂದ, ಈ ಬಗ್ಗೆ ಪರಿಶೀಲನೆ ನಡೆಸಿ ಸೂಕ್ತ ನಿರ್ದೇಶನವನ್ನು ನೀಡಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಸುಲೋಚನಾ ಬಾಯಿಯವರು ಮಾತನಾಡುತ್ತಾ, ಅರಸೀಕೆರೆ ತಾಲ್ಲೂಕಿನ ವಿಜಯ ಬ್ಯಾಂಕ್ ಮತ್ತು ಹಾರನಹಳ್ಳಿಯ ಕಾರ್ಪೋರೇಷನ್ ಬ್ಯಾಂಕಿನವರು ಸ್ವಸಹಾಯ ಗುಂಪು ಮತ್ತು ಸ್ತ್ರೀ ಶಕ್ತಿ ಸಂಘಗಳಿಗೆ ಸಾಲ ಸೌಲಭ್ಯವನ್ನು ನೀಡುತ್ತಿಲ್ಲವೆಂದು ತಿಳಿಸಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಸ್ವಸಹಾಯ ಸಂಘಗಳು | ವಾಣಿಜ್ಯ ಉದ್ದೇಶಕ್ಕೆ ಮೀಸಲಿರಿಸಿರುವ ಉತ್ತಮ ನಿವೇಶನದಲ್ಲಿ ರೂ.1.50(ರೂಪಾಯಿ ಒಂದು ಕೋಟಿ ಐವತ್ತು ಲಕ್ಷ ರೂಪಾಯಿ ಮಾತ್ರ)ಗಳಲ್ಲಿ ನಿರ್ಮಿಸಲು ಹಾಗೂ ವಯಸ್ಕರ ಶಿಕ್ಷಣ ಇಲಾಖೆಯ ಕಛೇರಿ ಸ್ಥಳದಲ್ಲಿ ಸಾಮರ್ಥ್ಯ ಸೌಧ ಹಾಗೂ ರಾಜೀವ್ ಗಾಂಧಿ ಮಾಹಿತಿ ಸೇವಾ ಕೇಂದ್ರದ ಸುಸಜ್ಜಿತ ಕಟ್ಟಡವನ್ನು ನಿರ್ಮಿಸಲು ಸಭೆಯು ಸರ್ವಾನುಮತದಿಂದ ಅನುಮೋದನೆ ನೀಡಿತು. |

| | | | |
|---|---|---|---|
| | | ಮತ್ತು ಸ್ತ್ರೀ ಶಕ್ತಿ ಸಂಘಗಳಿಗೆ ಸಾಲ ಸೌಲಭ್ಯ ನೀಡಲು ನಿರಾಕರಿಸುತ್ತಿರುವ ಬ್ಯಾಂಕುಗಳ ಬಗ್ಗೆ ಲೀಡ್ ಬ್ಯಾಂಕ್ ಸಭೆಯಲ್ಲಿ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ಸಾಲ ಸೌಲಭ್ಯವನ್ನು ಒದಗಿಸುವ ಬಗ್ಗೆ ಕ್ರಮ ವಹಿಸಲಾಗುವುದೆಂದು ತಿಳಿಸಿದರು.<br>ಮುಂದುವರೆದು, ಜಿಲ್ಲೆಯಲ್ಲಿ ಸ್ತ್ರೀ ಶಕ್ತಿ ಸಂಘ ಮತ್ತು ಸ್ವಸಹಾಯ ಸಂಘಗಳ ಮೂಲಕ ಸ್ವಯಂ ಉದ್ಯೋಗ ಕಾರ್ಯಕ್ರಮವನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ. ಇದಕ್ಕಾಗಿ ಧರ್ಮಸ್ಥಳದ ಧರ್ಮಾಧಿಕಾರಿಯವರನ್ನು ಸಂಪರ್ಕಿಸಿ ಹಾಸನ ಜಿಲ್ಲೆಯ ಸ್ತ್ರೀ ಶಕ್ತಿ ಸಂಘಗಳ ಮೂಲಕ ಅಗರಭತ್ತಿ, ಕ್ಯಾಂಡಲ್ ಇವೇ ಮೊದಲಾದವುಗಳನ್ನು ತಯಾರಿಸುವ ಬಗ್ಗೆ ಸೂಕ್ತ ತರಬೇತಿ ನೀಡಿ ಸಹಕಾರವನ್ನು ನೀಡುವಂತೆ ಕೋರಲಾಗುವುದು. ಇದಕ್ಕಾಗಿ ಮಾನ್ಯ ಜಿಲ್ಲಾ ಪಂಚಾಯಿತಿ ಮಹಿಳಾ ಸದಸ್ಯರುಗಳು ಸ್ತ್ರೀ ಶಕ್ತಿ ಸಂಘಗಳ ಚಟುವಟಿಕೆಗಳ ಬಗ್ಗೆ ಹೆಚ್ಚಿನ ಗಮನ ನೀಡಬೇಕೆಂದು ತಿಳಿಸಿದರು. | |
| 5 | ಕಾಮಧೇನು ಸಹಕಾರಿ ವಿದ್ಯಾಶ್ರಮ (ನಿ.) ಹಾಸನ ರವರಿಗೆ ಸಹಾಯಧನ ನೀಡುವ ಬಗ್ಗೆ. | ಮುಖ್ಯ ಆಡಳಿತಾಧಿಕಾರಿ, ಕಾಮಧೇನು ಸಹಕಾರಿ ವಿದ್ಯಾಶ್ರಮ (ನಿ.) ಹಾಸನ ಇವರು ಮನವಿಯನ್ನು ಸಲ್ಲಿಸಿ ಸಂಸ್ಥೆಯ ವತಿಯಿಂದ ಚೈತನ್ಯ ಮಂದಿರ (ವೃದ್ಧಾಶ್ರಮ ) ಮತ್ತು ಶಿಶು ಕೇಂದ್ರ (ದತ್ತು ಸ್ವೀಕಾರ ಕೇಂದ್ರ)ವನ್ನು ನಡೆಸುತ್ತಿದ್ದು, ಇದರಲ್ಲಿ 35 ಜನ ವೃದ್ಧರು ಮತ್ತು 17 ಶಿಶುಗಳಿದ್ದು, ಇವರುಗಳಿಗೆ ಹೊದಿಕೆಗಳನ್ನು ಕೊಳ್ಳಲು ಆರ್ಥಿಕ ನೆರವನ್ನು ನೀಡಬೇಕಾಗಿ ಕೋರಿರುತ್ತಾರೆ. | ಸಭೆಯಲ್ಲಿ ಚರ್ಚಿಸಿದ ನಂತರ, ಮುಖ್ಯ ಆಡಳಿತಾಧಿಕಾರಿ, ಕಾಮಧೇನು ಸಹಕಾರಿ ವಿದ್ಯಾಶ್ರಮ (ನಿ.), ಹಾಸನ ಇವರು ಕೋರಿರುವಂತೆ ಚೈತನ್ಯ ಮಂದಿರ (ವೃದ್ಧಾಶ್ರಮ) ಮತ್ತು ಶಿಶು ಕೇಂದ್ರ (ದತ್ತು ಸ್ವೀಕಾರ ಕೇಂದ್ರ) ದಲ್ಲಿರುವ ವೃದ್ಧರು ಮತ್ತು ಶಿಶುಗಳಿಗೆ ಹೊದಿಕೆಗಳನ್ನು ಖರೀದಿಸಲು ಜಿಲ್ಲಾ ಪಂಚಾಯಿತಿ ವತಿಯಿಂದ ₹ 10000/-(₹ ಹತ್ತು ಸಾವಿರ ಮಾತ್ರ)ಗಳ ಸಹಾಯಧನವನ್ನು ನೀಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| 6 | ನಾಟಕ ಕಾರ್ಯಾಗಾರಕ್ಕೆ ಆರ್ಥಿಕ ನೆರವು ನೀಡುವ ಕುರಿತು | ಕಾರ್ಯದರ್ಶಿ, ಭೂಮಿ ಪ್ರತಿಷ್ಠಾನ (ರಿ) ಹಾಸನ ಇವರು ಮನವಿಯನ್ನು ಸಲ್ಲಿಸಿ ಜಿಲ್ಲೆಯಲ್ಲಿ ರಂಗಭೂಮಿ ಚಟುವಟಿಕೆಗೆ ಮತ್ತಷ್ಟು ಕ್ರಿಯಾ ಶೀಲತೆ ತುಂಬುವ ದೃಷ್ಟಿಯಿಂದ ಒಂದು ತಿಂಗಳ ಕಾಲ ನಾಟಕ ಕಾರ್ಯಾಗಾರ ನಡೆಸಲಾಗುತ್ತಿದ್ದು, ಜಿಲ್ಲಾ ಪಂಚಾಯಿತಿ ವತಿಯಿಂದ ರೂ.25000/-ಗಳ ಧನಸಹಾಯವನ್ನು ನೀಡಬೇಕೆಂದು ಕೋರಿರುತ್ತಾರೆ. | ಸಭೆಯಲ್ಲಿ ಚರ್ಚಿಸಿದ ನಂತರ, ಕಾರ್ಯದರ್ಶಿ, ಭೂಮಿ ಪ್ರತಿಷ್ಠಾನ (ರಿ) ಹಾಸನ ಇವರು ಕೋರಿರುವಂತೆ ಜಿಲ್ಲೆಯಲ್ಲಿ ನಡೆಯುವ ಒಂದು ತಿಂಗಳ ನಾಟಕ ಕಾರ್ಯಾಗಾರಕ್ಕೆ ಅನುಕೂಲವಾಗುವಂತೆ ಜಿಲ್ಲಾ ಪಂಚಾಯಿತಿ ವತಿಯಿಂದ ₹.10000/-(₹ ಹತ್ತು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |

| | | | |
|---|---|---|---|
| 9 | ಹಾಸನ ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಜಿಲ್ಲಾ ಮಟ್ಟದ ಕ್ರೀಡಾ ಕೂಟಕ್ಕೆ ವಿಶೇಷ ಅನುದಾನ ಕೋರುವ ಬಗ್ಗೆ. | ದಿನಾಂಕ: 28-08-2010ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯಲ್ಲಿ ಹಾಸನ ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಜಿಲ್ಲಾ ಮಟ್ಟದ ಕ್ರೀಡಾ ಕೂಟಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ₹.5000/-ಗಳ ಧನಸಹಾಯವನ್ನು ನೀಡಲು ತೀರ್ಮಾನಿಸಲಾಗಿದ್ದು, ಕ್ರೀಡಾಕೂಟಕ್ಕೆ ಹೆಚ್ಚಿನ ಹಣದ ಅಗತ್ಯವಿರುವುದನ್ನು ಮನಗಂಡು ಜಿಲ್ಲಾ ಪಂಚಾಯಿತಿಯಿಂದ ₹.5000/-ಗಳ ಬದಲಿಗೆ ರೂ.10000.00ಗಳನ್ನು ನೀಡಬೇಕೆಂದು ಮಾನ್ಯ ಉಪಾಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರು ಕೋರಿರುತ್ತಾರೆ. | ಸಭೆಯಲ್ಲಿ ಚರ್ಚಿಸಿದ ನಂತರ, ಹಾಸನ ಜಿಲ್ಲೆಯ ಪದವಿ ಪೂರ್ವ ಕಾಲೇಜುಗಳ ಜಿಲ್ಲಾ ಮಟ್ಟದ ಕ್ರೀಡಾ ಕೂಟಕ್ಕೆ ಈಗಾಗಲೇ ತೀರ್ಮಾನಿಸಿರುವಂತೆ ₹.5000/-ಗಳ ಬದಲಿಗೆ ₹.10000/-(₹ ಹತ್ತು ಸಾವಿರ ಮಾತ್ರ)ಗಳ ಧನ ಸಹಾಯವನ್ನು ನೀಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| 10 | ಅರಕಲಗೂಡಿನಲ್ಲಿರುವ ಹಳೇ ತಾಲ್ಲೂಕು ಕಛೇರಿ ಕಟ್ಟಡವನ್ನು ವಸತಿ ನಿಲಯಕ್ಕೆ ಉಪಯೋಗಿಸಿಕೊಳ್ಳುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ ಲೋಕನಾಥ್ ರವರು ಮನವಿಯನ್ನು ಸಲ್ಲಿಸಿ ಅರಕಲಗೂಡಿನಲ್ಲಿರುವ ಬಿ.ಸಿ.ಎಂ ಇಲಾಖೆಯ ಪ್ರಿ-ಮೆಟ್ರಿಕ್ ವಸತಿ ನಿಲಯ ಹಾಗೂ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಸತಿ ನಿಲಯಗಳು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುತ್ತವೆ. ಆದರೆ ಹಳೇ ತಾಲ್ಲೂಕು ಕಛೇರಿ ಕಟ್ಟಡವು ಹಾಲಿ ಖಾಲಿ ಇದ್ದು, ಸದರಿ ಕಟ್ಟಡವನ್ನು ದುರಸ್ಥಿ ಪಡಿಸಿಕೊಂಡು ವಸತಿ ನಿಲಯಗಳು ಬಳಸಿಕೊಂಡಲ್ಲಿ ಸರ್ಕಾರಕ್ಕೆ ಹಣವು ಸಹ ಉಳಿತಾಯವಾಗುವುದು. ಆದ್ದರಿಂದ, ಹಳೇ ತಾಲ್ಲೂಕು ಕಛೇರಿ ಕಟ್ಟಡವನ್ನು ವಸತಿ ನಿಲಯಕ್ಕೆ ಬಳಸಲು ಸಂಬಂಧಿಸಿದವರಿಗೆ ಸೂಕ್ತ ಆದೇಶವನ್ನು ನೀಡಬೇಕೆಂದು ಕೋರಿರುತ್ತಾರೆ. | ಸಭೆಯಲ್ಲಿ ಚರ್ಚಿಸಿದ ನಂತರ, ಅರಕಲಗೂಡು ಪಟ್ಟಣದಲ್ಲಿರುವ ಹಳೇ ತಾಲ್ಲೂಕು ಕಛೇರಿ ಕಟ್ಟಡಕ್ಕೆ ಅವಶ್ಯ ದುರಸ್ಥಿಯನ್ನು ಮಾಡಿ ಹಿಂದುಳಿದ ವರ್ಗಗಳ ಇಲಾಖೆಯ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಕ್ಕೆ ಉಪಯೋಗಿಸಿಕೊಳ್ಳಲು ಅಗತ್ಯ ಕ್ರಮ ವಹಿಸುವಂತೆ ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಇಲಾಖೆ, ಹಾಸನ ಇವರಿಗೆ ತಿಳಿಸಲಾಯಿತು. |
| 11 | ದಿನಾಂಕ: 26-11-2010 ರಂದು ನಡೆಯುವ ಕಾನೂನು ವಕೀಲರ ದಿನಾಚರಣೆಗೆ ಆರ್ಥಿಕ ಸಹಾಯ ನೀಡುವ ಬಗ್ಗೆ. | ಮಾನ್ಯ ಉಪಾಧ್ಯಕ್ಷರು, ಜಿಲ್ಲಾ ಪಂಚಾಯಿತಿ ಹಾಸನ ಇವರು ಮನವಿಯನ್ನು ಸಲ್ಲಿಸಿ ಹಾಸನ ಜಿಲ್ಲೆಯಲ್ಲಿ ದಿನಾಂಕ: 26-11-2010ರಂದು ವಕೀಲರುಗಳ ದಿನಾಚರಣೆ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದ್ದು, ಜಿಲ್ಲಾ ಪಂಚಾಯಿತಿ ವತಿಯಿಂದ ಆರ್ಥಿಕ ಸಹಾಯವನ್ನು ಮಾಡುವಂತೆ ಕೋರಿರುತ್ತಾರೆ. | ಸಭೆಯಲ್ಲಿ ಚರ್ಚಿಸಿದ ನಂತರ, ದಿನಾಂಕ: 26-11-2010ರಂದು ನಡೆದ ವಕೀಲರುಗಳ ದಿನಾಚರಣೆಗೆ ಜಿಲ್ಲಾ ಪಂಚಾಯಿತಿ ವತಿಯಿಂದ ₹.10000/-(₹ ಹತ್ತು ಸಾವಿರ ಮಾತ್ರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| 12 | ಬೇಲೂರಿನಲ್ಲಿ ಕಾಲೇಜು ಬಾಲಕರ ವಿದ್ಯಾರ್ಥಿ ನಿಲಯ ನಡೆಸಲು ಶ್ರೀ | ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಯವರು ತಮ್ಮ ಪತ್ರ ಸಂಖ್ಯೆ: ಜಿಸಕಅ/ಡಿ6/ಸಿಆರ್ 20/2010-11 ದಿನಾಂಕ: 06-09-2010ರಲ್ಲಿ ಬೇಲೂರು ಟೌನ್ ನಲ್ಲಿ ನಡೆಯುತ್ತಿರುವ ಕಾಲೇಜು ಬಾಲಕರ ವಿದ್ಯಾರ್ಥಿ ನಿಲಯಕ್ಕೆ ಹೆಚ್ಚುವರಿಯಾಗಿ ಶ್ರೀ ರಘು ಬಿನ್ ಹೆಚ್.ಡಿ. | ಸಭೆಯಲ್ಲಿ ಚರ್ಚಿಸಿದ ನಂತರ, ಬೇಲೂರು ಟೌನ್ ನಲ್ಲಿ ನಡೆಯುತ್ತಿರುವ ಕಾಲೇಜು ಬಾಲಕರ ವಿದ್ಯಾರ್ಥಿ ನಿಲಯಕ್ಕೆ ಹೆಚ್ಚು ವರಿಯಾಗಿ ಶ್ರೀ ರಘು ಬಿನ್ ಹೆಚ್.ಡಿ. ಗೋವಿಂದರಾಜ್, |

| | | | |
|---|---|---|---|
| 7 | ಕ್ರೀಡಾಕೂಟಕ್ಕೆ ಆರ್ಥಿಕ ಸಹಾಯ ನೀಡುವಂತೆ ಕೋರಿ | ಮಾನ್ಯ ಉಪಾಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರು ತಮ್ಮ ಪತ್ರ ಸಂಖ್ಯೆ: ಜಿಪಂಹಾ/ಉಪಾಧ್ಯಕ್ಷರು/ ಆ.ಶಾ/198/2010-11 ದಿನಾಂಕ: 06-09-2010ರಲ್ಲಿ ಶ್ರೀ ಕುವೆಂಪು ಪದವಿ ಪೂರ್ವ ಕಾಲೇಜು, ಕೆ.ಆರ್.ಪುರಂ, ಹಾಸನ ಇವರ ಆಶ್ರಯದಲ್ಲಿ ಹಾಸನ ತಾಲ್ಲೂಕು ಮಟ್ಟದ ಪದವಿ ಪೂರ್ವ ಕಾಲೇಜುಗಳ ಕ್ರೀಡಾಕೂಟವು ದಿನಾಂಕ: 06-09-2010 ಹಾಗೂ 07-09-2010ರಂದು ಹಾಸನ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯಲಿದ್ದು, ಸದರಿ ಕ್ರೀಡಾ ಕೂಟಕ್ಕೆ ಹಾಸನ ತಾಲ್ಲೂಕಿನ ಪದವಿ ಪೂರ್ವ ಕಾಲೇಜುಗಳ ವಿವಿಧ ಕ್ರೀಡಾಪಟುಗಳು ಕ್ರೀಡಾಕೂಟದಲ್ಲಿ ಭಾಗವಹಿಸಲಿದ್ದಾರೆ. ಆದ್ದರಿಂದ, ಸದರಿ ಕ್ರೀಡಾ ಕೂಟವನ್ನು ಯಶಸ್ವಿಯಾಗಿ ನಡೆಸಲು ರೂ.10000/-ಗಳ ಧನಸಹಾಯವನ್ನು ನೀಡಲು ಮಂಜೂರಾತಿಯನ್ನು ನೀಡಬೇಕೆಂದು ಕೋರಿರುತ್ತಾರೆ. | ಸಭೆಯಲ್ಲಿ ವಿವರವಾಗಿ ಚರ್ಚಿಸಿದ ನಂತರ ಮಾನ್ಯ ಉಪಾಧ್ಯಕ್ಷರು ಕೋರಿರುವಂತೆ ಶ್ರೀ ಕುವೆಂಪು ಪದವಿ ಪೂರ್ವ ಕಾಲೇಜು, ಕೆ.ಆರ್.ಪುರಂ, ಹಾಸನ ಇವರ ಆಶ್ರಯದಲ್ಲಿ ದಿನಾಂಕ: 06-09-2010 ಮತ್ತು 07-09-2010ರಂದು ನಡೆಯುವ ಹಾಸನ ತಾಲ್ಲೂಕು ಮಟ್ಟದ ಪದವಿ ಪೂರ್ವ ಕಾಲೇಜುಗಳ ಕ್ರೀಡಾ ಕೂಟಕ್ಕೆ ಜಿಲ್ಲಾ ಪಂಚಾಯಿತಿ ವತಿಯಿಂದ ₹.10000/-(₹ ಹತ್ತು ಸಾವಿರ ಮಾತ್ರ)ಗಳ ಧನಸಹಾಯವನ್ನು ನೀಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| 8 | ಬೇಲೂರು ತಾಲ್ಲೂಕು ರಾಯಪುರ ಬಡಾವಣೆಯ ಸಾಗುವಳಿ ಜಮೀನನ್ನು ಕರ್ನಾಟಕ ಗೃಹ ಮಂಡಳಿ ಯವರು ನಿವೇಶನ ಮಾಡಲು ವಶಪಡಿಸಿ ಕೊಳ್ಳದಿರುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ ಕೆ.ಸಿದ್ದೇಗೌಡರವರು ಮಾತನಾಡುತ್ತಾ, ಹಾಸನ ಜಿಲ್ಲೆ, ಬೇಲೂರು ತಾಲ್ಲೂಕು ಕಸಬಾ ಹೋಬಳಿ, ರಾಯಪುರ ಗ್ರಾಮದಲ್ಲಿ ಒಟ್ಟು 74.33 ಎಕರೆವುಳ್ಳ ಜಮೀನುಗಳನ್ನು ಭೂಸ್ವಾಧೀನ ಪಡಿಸಿಕೊಳ್ಳಲು ವಿಶೇಷ ಭೂಸ್ವಾಧೀನಾಧಿಕಾರಿಗಳು, ಕರ್ನಾಟಕ ಗೃಹ ಮಂಡಳಿ, ಬೆಂಗಳೂರು ಇವರು ಅಧಿಸೂಚನೆ ಹೊರಡಿಸಿರುತ್ತಾರೆ. ಆದರೆ, ಪ್ರಸ್ತಾವಿತ ಸ್ಥಳ ನೀರಾವರಿ ಕೃಷಿ ಭೂಮಿಯಾಗಿದ್ದು, ವಾರ್ಷಿಕ 2 ಬೆಳೆ ತೆಗೆಯಲಾಗುತ್ತದೆ. ಅಲ್ಲದೆ ಈ ಭೂಮಿಯಲ್ಲಿ ಬೇಸಿಗೆಯಲ್ಲೂ ಸಹ ನೀರು ಹರಿಯುತ್ತಿದ್ದು, ಒಂದು ಅಡಿ ಗುಂಡಿ ತೆಗೆದರೂ ಸಾಕು ಜಲ ಬರುತ್ತಿರುತ್ತದೆ. ಪ್ರಸ್ತಾವಿತ ಪ್ರದೇಶದ ಪೂರ್ವಕ್ಕೆ ಕೂಡಲೂರು ನಾಲೆ ಹರಿಯುತ್ತಿದ್ದು, ಪಶ್ಚಿಮಕ್ಕೆ ಯಗಚಿ ನದಿ ಹರಿಯುತ್ತಿದ್ದು, ಸಂಪೂರ್ಣ ಪ್ರದೇಶವು ಕೃಷಿಗೆ ಹೇಳಿ ಮಾಡಿಸಿದಂತಿರುತ್ತದೆ. ಅಲ್ಲದೆ, ಸದರಿ ಪ್ರದೇಶಕ್ಕೆ ಹೊಂದಿಕೊಂಡಂತೆ ಯು.ಜಿ.ಡಿ ಪ್ಲಾಂಟ್ ಇದ್ದು, ದುರ್ವಾಸನೆಯಿಂದ ಕೂಡಿರುವುದರಿಂದ, ಸದರಿ ಪ್ರದೇಶವು ವಸತಿ ಯೋಜನೆಗೆ ಸೂಕ್ತ ಸ್ಥಳವಾಗಿರುವುದಿಲ್ಲ. ಆದ್ದರಿಂದ, ರಾಯಪುರ ಗ್ರಾಮದ ಜಮೀನನ್ನು ಕೈಬಿಡಲು ಸಭೆಯಲ್ಲಿ ನಿರ್ಣಯವನ್ನು ಮಾಡಬೇಕೆಂದು ಕೋರಿದರು. | ಸಭೆಯಲ್ಲಿ ವಿವರವಾಗಿ ಚರ್ಚಿಸಿದ ಬೇಲೂರು ತಾಲ್ಲೂಕು ರಾಯಪುರ ಗ್ರಾಮದಲ್ಲಿ ಕರ್ನಾಟಕ ಗೃಹ ಮಂಡಳಿಯವರು ಭೂಸ್ವಾಧೀನ ಪಡಿಸಿಕೊಳ್ಳಲು ಉದ್ದೇಶಿಸಿರುವ ಜಮೀನು ಕೃಷಿಗೆ ಯೋಗ್ಯವಾಗಿ ರುವುದರಿಂದ ಮತ್ತು ಅದರ ಪಕ್ಕದಲ್ಲಿ ಯು.ಜಿ.ಡಿ ಪ್ಲಾಂಟ್ ಇರುವುದರಿಂದ, ಸದರಿ ಜಮೀನನ್ನು ಕರ್ನಾಟಕ ಗೃಹ ಮಂಡಳಿಯವರು ವಶಪಡಿಸಿಕೊಳ್ಳಬಾರದೆಂದು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |

| | | | |
|---|---|---|---|
| | ರಘು ಬಿನ್ ಹೆಚ್.ಡಿ ಗೋವಿಂದರಾಜ್ ಬೇಲೂರುರವರ ಕಟ್ಟಡಕ್ಕೆ ಬಾಡಿಗೆಯನ್ನು ನಿಗದಿ ಪಡಿಸಿದ್ದು, ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ. | ಗೋವಿಂದರಾಜ್, ಬೇಲೂರುರವರ ಕಟ್ಟಡವನ್ನು ದಿ: 08-01-10 ರಿಂದ ಬಾಡಿಗೆಗೆ ಪಡೆದಿದ್ದು, ಕಾರ್ಯಪಾಲಕ ಇಂಜಿನಿಯರ್, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಹಾಸನ ವಿಭಾಗ, ಹಾಸನ ಇವರು ಮಾಹೆಯಾನ ₹.23700/-ರಂತೆ ಬಾಡಿಗೆಯನ್ನು ನಿಗದಿಪಡಿಸಿ ನಮೂನೆ -10ರಲ್ಲಿ ಶಿಫಾರಸ್ಸು ಮಾಡಿರುತ್ತಾರೆ. ಆದ್ದರಿಂದ, ಸದರಿ ಕಟ್ಟಡಕ್ಕೆ ದಿ: 08-01-10 ರಿಂದ, ಮಾಹೆಯಾನ ₹.23700/-ರಂತೆ ಬಾಡಿಗೆಯನ್ನು ಪಾವತಿಸುವ ಬಗ್ಗೆ ಅನುಮೋದನೆಯನ್ನು ನೀಡಬೇಕೆಂದು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. | ಬೇಲೂರುರವರ ಕಟ್ಟಡಕ್ಕೆ ಮಾಹೆಯಾನ ದಿ: 08-01-2010 ರಿಂದ ₹.23700/-(₹ ಇಪ್ಪತ್ತ ಮೂರು ಸಾವಿರದ ಏಳು ನೂರು ಮಾತ್ರ)ಗಳ ಬಾಡಿಗೆಯನ್ನು ಪಾವತಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು. |
| | | ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | |

(ಕಾಮಾಕ್ಷಿರಾಜು),
ಅಧ್ಯಕ್ಷರು,
ಜಿಲ್ಲಾ ಪಂಚಾಯತ್, ಹಾಸನ.